ನಿಮ್ಮೂರು ಸುದ್ದಿ
ಕನ್ನಡ ದಿನ ಪತ್ರಿಕೆ NIMMURU SUDDI
ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 34 RNI Number : KNKAN/25/A2770 07-02-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :34 ರಾಯಚೂರು 07-02-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಸಿದ್ದರಾಮಯ್ಯ 5 ವರ್ಷ ಸಿಎಂ, ನಾಯಕತ್ವ ಬದಲಾವಣೆ ಇಲ್ಲ ಅಂತಾ ಹೈಕಮಾಂಡ್ ಸಿಗ್ನಲ್ ಕೊಟ್ಟಿದೆ'

ಮೈಸೂರು,ಫೆ.06-

ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರದಲ್ಲಿ ನಮ್ಮಲ್ಲಿ ಯಾವುದೇ ಗೊಂದಲಗಳು ಇಲ್ಲ. ಸದ್ಯಕ್ಕೆ ಅವರನ್ನು ಇಳಿಸಿ ಎಂದು ಯಾರು ಕೇಳುತ್ತಿಲ್ಲ. ಹೈಕಮಾಂಡ್ ನೇರವಾಗಿ ಹೇಳದೇ ಇರಬಹುದು, ಆದರೆ ಸದ್ಯಕ್ಕೆ ನಾಯಕತ್ವದಲ್ಲಿ ಬದಲಾವಣೆ ಮಾಡಲ್ಲ ಎಂದು ಸ್ಪಷ್ಟವಾಗಿ ಸಿಗ್ನಲ್ ಕೊಟ್ಟಿದೆ. ಆದ್ದರಿಂದ ಸಿದ್ದರಾಮಯ್ಯ ಅವರು 5 ವರ್ಷ ಸಿಎಂ ಆಗಿರುತ್ತಾರೆ ಅಂತಾ ನಾನು ನಂಬುತ್ತೇನೆ ಎಂದು ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಪ್ರತಿಕ್ರಿಯೆ ನೀಡಿದ್ದಾರೆ.

ಮೈಸೂರಿನಲ್ಲಿ ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ್ದ ವೇಳೆ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಯತೀಂದ್ರ ಸಿದ್ದರಾಮಯ್ಯ ಅವರು ಸಿದ್ದರಾಮಯ್ಯ ಅವರು 5 ವರ್ಷ ಸಿಎಂ ಆಗಿರುತ್ತಾರೆ ಎಂದು ಮತ್ತೊಮ್ಮೆ ಪುನರುಚ್ಚರಿಸಿದರು.

ಬದಲಾವಣೆ ಬೇಡಿಕೆಗೆ ಹೈಕಮಾಂಡಗ್ ಮನ್ನಣೆ ಕೊಟ್ಟಿಲ್ಲ: ಸಿಎಂ ಬದಲಾವಣೆ ಬಗ್ಗೆ ರಾಜಕೀಯ ವಲಯದಲ್ಲಿ ಯಾವುದೇ ಚರ್ಚೆ ಆಗುತ್ತಿಲ್ಲ. ಕೇವಲ ಮಾಧ್ಯಮದಲ್ಲಿ ಮಾತ್ರ ಈ ವಿಷಯ ಚರ್ಚೆ ಆಗುತ್ತಿದೆ. ಸಿಎಂ ಬದಲಾವಣೆ ವಿಷಯ ಈಗಾಗಲೇ ಸೆಟಲ್ ಆಗಿದೆ. ಸಿಎಂ ಅವರನ್ನು ಕೆಳಗೆ ಇಳಿಸಿ ಎಂದು ಯಾರೂ ಹೇಳಿಲ್ಲ. ಜೊತೆಗೆ ಕೆಲವರ ಬೇಡಿಕೆಗೂ ಹೈಕಮಾಂಡ್ ಕೂಡ ಯಾವುದೇ ಮನ್ನಣೆ ಕೊಟ್ಟಿಲ್ಲ ಎಂದು ಎಂದು ಯತೀಂದ್ರ ಪ್ರತಿಕ್ರಿಯೆ ನೀಡಿದ್ದಾರೆ.



ತಾಯಿ ಸಂತೋಷ ವ್ಯಕ್ತಪಡಿಸಿದ್ದಾರೆ : ಮೂಡಾ ಹಗರಣದಲ್ಲಿ ಕೋರ್ಟ್ ಬಿ ರಿಪೋರ್ಟ್ ಪುರಸ್ಕಾರ ಮಾಡಿರುವ ಬಗ್ಗೆ ಪ್ರತಿಕ್ರಿಯಿಸಿದ ಯಂತೀಂದ್ರ ಸಿದ್ದರಾಮಯ್ಯ, ನಮಗೆ ಕಾನೂನಿನಲ್ಲಿ ನಂಬಿಕೆ ಇತ್ತು, ನಾವೇನು ತಪ್ಪು ಮಾಡಿರಲಿಲ್ಲ. ಕೋರ್ಟ್ ತೀರ್ಪನ್ನು ಸ್ವಾಗತ ಮಾಡುತ್ತೇವೆ. ಕೋರ್ಟ್ ತೀರ್ಪಿನಿಂದ ನಮ್ಮ ತಾಯಿ ಸಂತೋಷ ವ್ಯಕ್ತಪಡಿಸಿದ್ದಾರೆ. ದೂರುದಾರ ಸ್ನೇಹಮಹಿ ಕೃಷ್ಣ ಅವರು ಹೋರಾಟ ಮಾಡಲಿ. ಕಾನೂನು ಎಲ್ಲರಿಗೂ ಒಂದೇ ಎಂದರು.

ಯಾವುದೇ ಇಲಾಖೆಯಲ್ಲಿ ಮೂಗು ತೂರಿಸುತ್ತಿಲ್ಲ: ಸಚಿವ ಜಾರ್ಜ್ ಇಲಾಖೆಯಲ್ಲಿ ಮೂಗು ತೂರಿಸುತ್ತಿದ್ದಾರೆ ಎಂಬ ಆರೋಪ ವಿಚಾರ ನನಗೆ ಗೊತ್ತಿಲ್ಲ, ಖುದ್ದು ಸಚಿವ ಜಾರ್ಜ್ ಅವರೇ ಈ ಬಗ್ಗೆ ಸ್ಪಷ್ಟಪಡಿಸಿದ್ದಾರೆ. ಸುಮ್ಮನೆ ನನ್ನ ಹೆಸರನ್ನು ಬಿಜೆಪಿ ಎಳೆದು ತರುವ ಕೆಲಸ ಮಾಡುತ್ತಿದ್ದಾರೆ. ಅವರ ಆರೋಪದಲ್ಲಿ ಯಾವುದೇ ಸತ್ಯ ಇಲ್ಲ. ಸದನದಲ್ಲಿ ಕೂಡ ಬಿಜೆಪಿ ನನ್ನ ಹೆಸರನ್ನ ಹೇಳಿದೆ. ಹಿಂದೆಯಿಂದಲೂ ನನ್ನನ್ನ ಬಿಜೆಪಿಯವರು ಟಾರ್ಗೆಟ್ ಮಾಡಿದ್ದಾರೆ ಎಂದು ದೂರಿದರು.

ಮನರೇಗಾ ವಿಚಾರದಲ್ಲಿ ಬಿಜೆಪಿ ಕಾಂಗ್ರೆಸ್ ನಡುವಿನ ಜಟಾಪಟಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಯತೀಂದ್ರ ಸಿದ್ದರಾಮಯ್ಯ, ನಾವು ಗಾಂಧೀಜಿ ಅವರ ಗ್ರಾಮ ಸ್ವರಾಜ್ ಪರಿಕಲ್ಪನೆಯಲ್ಲಿ ಸಾಗುತ್ತಿದ್ದೇವೆ. ಆದರೆ ಬಿಜೆಪಿ ಅವರಿಗೆ ಜನರ ಕೆಲಸ ಬೇಕಿಲ್ಲ, ಗಾಂಧೀಜಿ ಅವರ ಹೆಸರು ಬೇಕಿಲ್ಲ, ಅದಕ್ಕಾಗಿ ಹೆಸರು ಬದಲಾವಣೆ ಮಾಡಿದ್ದಾರೆ ಅಷ್ಟೇ ಎಂದು ಟೀಕಿಸಿದರು.

ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಸ್ವಾಗತಿಸುತ್ತೇನೆ: ನಾನು ಕೂಡ ಬ್ಯಾಲೆಟ್ ಪೇಪರ್‌ನಲ್ಲಿ ಚುನಾವಣೆ ಮಾಡೋದನ್ನು ಸ್ವಾಗತಿಸುತ್ತೇನೆ. ದೊಡ್ಡ ದೊಡ್ಡ ರಾಷ್ಟ್ರಗಳಲ್ಲಿ ಇವಿಎಂ ಮಿಷನ್ ರದ್ದು ಮಾಡಿ ಬ್ಯಾಲೆಟ್ ಪೇಪರ್ ಬಳಸುತ್ತಿದ್ದಾರೆ. ತಂತ್ರಜ್ಞಾನದಲ್ಲಿ ಮುಂದುವರೆದ ರಾಷ್ಟ್ರಗಳೇ ಬ್ಯಾಲೆಟ್ ಪೇಪರ್‌ನಲ್ಲಿ ಚುನಾವಣೆಗೆ ಮುಂದಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಬ್ಯಾಲೆಟ್ ಪೇಪರ್‌ನಲ್ಲಿ ಚುನಾವಣೆ ನಡೆಸುವುದು ಸೂಕ್ತ ಎಂದು ಯತೀಂದ್ರ ಅಭಿಪ್ರಾಯಪಟ್ಟರು.

ಜಿಲ್ಲಾ ಉತ್ಸವ: ನಿರುದ್ಯೋಗ ನಿವಾರಣೆ ನಿಟ್ಟಿನಲ್ಲಿ ಹೆಚ್ಚು ಹೆಚ್ಚು ಉದ್ಯೋಗ ಮೇಳ ಆಯೋಜನೆ

ರಾಯಚೂರು ಫೆ. 06-

ಸರ್ಕಾರವು ಉದ್ಯೋಗ ಮೇಳಗಳನ್ನು ರಾಜ್ಯದಲ್ಲಿ ಹೆಚ್ಚು ಹೆಚ್ಚು ಆಯೋಜಿಸುವ ಮೂಲಕ ನಿರುದ್ಯೋಗ ನಿವಾರಣೆಗಾಗಿ ಶ್ರಮಿಸುತ್ತಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವ ಎನ್.ಎಸ್. ಭೋಸರಾಜು ಅವರು ಹೇಳಿದರು.

ಎಡೆದೊರೆ ನಾಡು ರಾಯಚೂರು ಉತ್ಸವದ ಅಂಗವಾಗಿ ರಾಯಚೂರಿನ ಕೃಷಿ ವಿ.ವಿ. ಆವರಣದಲ್ಲಿ ಉತ್ಸವದ ಎರಡನೆ ದಿನವಾದ ಶುಕ್ರವಾರ ಕೌಶಲ್ಯಾಭಿವೃದ್ಧಿ ಇಲಾಖೆ, ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ಇವರ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ ಉದ್ಯೋಗ ಮೇಳ ಉದ್ಘಾಟಿಸಿ ಅವರು ಮಾತನಾಡಿದರು.

ನಿರುದ್ಯೋಗಿಗಳು ತಮ್ಮ ಭವ್ಯ ಭವಿಷ್ಯ ಕಂಡುಕೊಳ್ಳಲು ನೆರವಾಗುವ ನಿಟ್ಟಿನಲ್ಲಿ, ಯುವನಿಧಿ ಗ್ಯಾರಂಟಿ ಯೋಜನೆಯನ್ನು ಜಾರಿಗೊಳಿಸಿ, ಅವರಿಗೆ ನಿರುದ್ಯೋಗ ಭತ್ಯೆ ನೀಡುತ್ತಿದ್ದೇವೆ. ಇದನ್ನು ಗಮನದಲ್ಲಿಟ್ಟುಕೊಂಡು ಸರ್ಕಾರವು ಉದ್ಯೋಗ ಮೇಳಗಳನ್ನು ಹೆಚ್ಚು ಹೆಚ್ಚು ಆಯೋಜಿಸುವ ಮೂಲಕ ಯುವಶಕ್ತಿಗೆ ಆಸರೆಯಾಗುತ್ತಿದೆ. 2023ರ ಚುನಾವಣೆ ಪೂರ್ವದಲ್ಲಿ ನೀಡಿದ ಭರವಸೆಯಂತೆ ಐದು ಗ್ಯಾರಂಟಿ ಯೋಜನೆಗಳ ಜೊತೆಗೆ 'ಯುವನಿಧಿ' ಯೋಜನೆಯನ್ನು ಜಾರಿಗೆ ತರಲಾಗಿದೆ. ಇಂತಹ ಉದ್ಯೋಗ ಮೇಳದ ಅವಕಾಶಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಚಿವ ಎನ್.ಎಸ್. ಭೋಸರಾಜು ಹೇಳಿದರು.



ಸಂಸದ ಜಿ. ಕುಮಾರನಾಯಕ್ ಅವರು ಮಾತನಾಡಿ, ಜಗತ್ತಿನಲ್ಲಿಯೇ ನಮ್ಮ ದೇಶದಲ್ಲಿ ಯುವ ಮಾನವ ಸಂಪನ್ಮೂಲ ಹೆಚ್ಚಿದೆ. ಯುವ ಜನತೆಯೇ ನಮ್ಮ ದೇಶದ ಆಸ್ತಿ. ಈ ಯುವಶಕ್ತಿಯ ಸದ್ಬಳಕೆಯನ್ನು ನಮ್ಮ ದೇಶ ಮಾಡಿಕೊಳ್ಳಬೇಕಿದೆ. ಯುವ ಜನರಿಗೆ ಹೆಚ್ಚು ಉದ್ಯೋಗ ಸೃಷ್ಟಿಯಾಗಲು, ಈ ಶಕ್ತಿಗೆ ಕೌಶಲ್ಯದ ತರಬೇತಿಯೂ ಅಗತ್ಯವಿದೆ. ಇದಕ್ಕಾಗಿ ಸರ್ಕಾರ ಹೆಚ್ಚಿನ ನೆರವು ನೀಡುತ್ತಿದೆ. ಯುವಜನತೆ ಕೌಶಲ್ಯವನ್ನು ಕಲಿತುಕೊಳ್ಳದಿದ್ದರೆ ಭವಿಷ್ಯದಲ್ಲಿ ಉತ್ತಮ ಉದ್ಯೋಗ ದೊರಕುವುದು ಕಷ್ಟಸಾಧ್ಯವಾಗುತ್ತದೆ ಎಂದರು.

ಕರ್ನಾಟಕ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರಾಯಚೂರು ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಯುವ ಜನತೆಗೆ ಹೆಚ್ಚಿನ ಉದ್ಯೋಗ ಸೃಷ್ಟಿ ಮಾಡಿಕೊಡಲು ಕೆಐಎಡಿಬಿ ಅಡಿ 4000 ಎಕರೆ ಪ್ರದೇಶದಲ್ಲಿ ಟೆಕ್ಸ್ಟೈಲ್ ಪಾರ್ಕ್ ಸ್ಥಾಪಿಸಲು ಸಿದ್ಧತೆ ನಡೆದಿದೆ. ಇದರಿಂದ ಸುಮಾರು ಹತ್ತು ಸಾವಿರಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಯಾಗುವ ನಿರೀಕ್ಷೆ ಇದೆ. ಜಿಲ್ಲೆಯಲ್ಲಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪನೆಯದರೆ, ರಾಯಚೂರು ಜಿಲ್ಲೆಯ ಜನರಿಗೂ ಹೆಚ್ಚಿನ ಉದ್ಯೋಗಗಳು ಸೃಜನೆಯಾಗುತ್ತವೆ ಎಂದರು.

ಉದ್ಯೋಗ ಮೇಳದಲ್ಲಿ 63 ಕಂಪನಿಗಳು ಭಾಗಿ :

ರಾಯಚೂರು ಉತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ ಉದ್ಯೋಗ ಮೇಳ ಹಲವಾರು ಯುವ ಜನರಿಗೆ ಬದುಕಿನ ಭದ್ರತೆ ಕಲ್ಪಿಸಿಕೊಳ್ಳಲು ವೇದಿಕೆಯಾಗಿ ಪರಿಗಣಿಸಿತು. ಮೇಳದಲ್ಲಿ ಆಟೋಮೊಬೈಲ್ ಮೆಕ್ಯಾನಿಕಲ್ ಕನ್‌ಸ್ಟ್ರಕ್ಷನ್, ಮಾರ್ಕೆಟಿಂಗ್, ಸೇಲ್ಸ್ ಅಂಡ್ ರೀಟೇಲ್ ಟೆಲಿಕಾಂ, ಬಿಪಿಒ, ಟೆಕ್ಸ್ಟೈಲ್, ಬ್ಯಾಂಕಿಗ್, ಫೈನಾನ್ಸ್, ಇನ್ಶೂರೆನ್ಸ್, ಹಾಸ್ಪಿಟಲ್ ಫಾರ್ಮಾಸಿಟಿಕಲ್ ಹೆಲ್ತ್ ಕೇರ ಟ್ರಾನ್ಸ್‌ಪೋರ್ಟ್, ಆಹಾರ ಸಂಸ್ಕರಣೆ, ಹೋಟೆಲ್ ನಿರ್ವಹಣೆ, ಗಾರ್ಮೆಂಟ್ಸ್, ಸೆಕ್ಯೂರಿಟಿ ಸೇರಿದಂತೆ ನಾನಾ ವಿಭಾಗದ 63 ಕ್ಕೂ ಹೆಚ್ಚು ಕಂಪೆನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಿದ್ದವು. ಉದ್ಯೋಗ ಮೇಳಕ್ಕೆ ಹತ್ತು ಸಾವಿರಕ್ಕೂ ಹೆಚ್ಚು ಅಭ್ಯರ್ಥಿಗಳು ನೊಂದಣಿ ಮಾಡಿಕೊಂಡಿದ್ದರಾದರೂ, ಶುಕ್ರವಾರ ಮಧ್ಯಾಹ್ನದ ವೇಳೆಗೆ 1200 ಕ್ಕೂ ಅಧಿಕ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಂಡರು. ಎಸ್‌ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೋಮಾ, ಪದವಿ, ಸ್ನಾತಕೋತ್ತರ ಪದವಿ ಸೇರಿದಂತೆ ವಿವಿಧ ಶೈಕ್ಷಣಿಕ ಅರ್ಹತೆ ಹೊಂದಿರುವ ಅಭ್ಯರ್ಥಿಗಳು ಉದ್ಯೋಗ ಮೇಳದ ಲಾಭ ಪಡೆದುಕೊಂಡರು. ಉದ್ಯೋಗಾಕಾಂಕ್ಷಿಗಳು ತಮ್ಮ ವಿದ್ಯಾರ್ಹತೆಗೆ ಅನುಗುಣವಾಗಿರುವ ಕೆಲಸಕ್ಕೆ ಅರ್ಜಿ ಸಲ್ಲಿಸಿ ಸಂದರ್ಶನದಲ್ಲಿ ಭಾಗವಹಿಸಿ ಸ್ಥಳದಲ್ಲಿಯೇ ನೇಮಕಾತಿ ಪತ್ರ ಪಡೆದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ, ಜಿ.ಪಂ. ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಯೋಜನಾಧಿಕಾರಿ ಡಾ. ಟಿ. ರೋಣಿ, ಉದ್ಯೋಗಾಧಿಕಾರಿ ನವೀನ್ ಕುಮಾರ ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಜಿ.ಯು. ಹುಡೇದ್ ಸೇರಿದಂತೆ ವಿವಿಧ ಅಧಿಕಾರಿಗಳು, ಗಣ್ಯರು ಪಾಲ್ಗೊಂಡಿದ್ದರು.

ಗ್ರಾಮೀಣ ಕ್ರೀಡೆಗಳಿಗೆ ಉತ್ತೇಜಿಸಿದ ಜಿಲ್ಲಾ ಉತ್ಸವ: ಸಾರ್ವಜನಿಕರಿಂದ ಹರ್ಷ

ರಾಯಚೂರು ಫೆಬ್ರವರಿ 06 (ಕರ್ನಾಟಕ ವಾರ್ತೆ): ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವವು ಗ್ರಾಮೀಣ ಕ್ರೀಡೆಗಳಿಗೆ ಉತ್ತೇಜನ ನೀಡುತ್ತಿದ್ದು, ಸ್ಪರ್ಧಾ ವೀಕ್ಷಿಸಲು ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರು ಅತ್ಯಂತ ಉತ್ಸಾಹದಿಂದ ವೀಕ್ಷಿಸಿ, ಹರ್ಷ ವ್ಯಕ್ತಪಡಿಸಿದರು.

ಹೌದು ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯ ಇತರೆ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಕ್ರೀಡಾಕೂಟ ಹಮ್ಮಿಕೊಂಡಿದ್ದು, ಕಳೆದ ಜನವರಿ 16 ರಿಂದಲೇ ವಿವಿಧ ಸ್ಪರ್ಧೆಗಳು ಪ್ರಾರಂಭಗೊಡು ಸೈಕ್ಲಿಂಗ್ ಮ್ಯಾರಥಾನ್ ಹಾಗೂ ಮ್ಯಾರಥಾನ್ ಓಟ, ಬಾಡಿ ಬಿಲ್ಡಿಂಗ್ ಸೇರಿದಂತೆ ವಿವಿಧ ಸ್ಪರ್ಧೆಗಳು ಈಗಾಗಲೆ ಯಶಸ್ವಿಯಾಗಿ ಜರುಗಿದ್ದು, ಫೆ. 6 ರಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ಸಂಗ್ರಾಣಿ ಕಲ್ಲು, ಉಸುಕಿನ ಮೂಟೆ ಎತ್ತುವ ಮತ್ತು ಕುಸ್ತಿ ಸೇರಿದಂತೆ ವಿವಿಧ ಗ್ರಾಮೀಣ ಕ್ರೀಡೆಗಳು ಜನರ ಮೆಚ್ಚುಗೆಯನ್ನು ಪಡೆದುಕೊಂಡವು.

ಶುಕ್ರವಾರನಡೆದ ಗ್ರಾಮೀಣ ಕ್ರೀಡಾ ಸ್ಪರ್ಧೆಗಳಿಗೆ ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತೆ ಸಂತೋಷ ರಾಣಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ್ ನಾಯಕ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೆ.ಡಿ ಬಡಿಗೇರ, ಆಹಾರ ಇಲಾಖೆಯ ಉಪನಿರ್ದೇಶಕ ನಾಸೀರ ಅಹ್ಮದ್, ಶಿಕ್ಷಣ ಇಲಾಖೆಯ ರಂಗಸ್ವಾಮಿ, ಪಾಲಿಕೆ ಎಇ ಮಹೇಶ, ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ದೈಹಿಕ ಶಿಕ್ಷಕರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಅತ್ಯಂತ ರೋಚಕತೆಯಿಂದ ಕೂಡಿದ್ದ ಸಂಗ್ರಾಣಿ ಕಲ್ಲು, ಉಸುಕಿನ ಮೂಟೆ ಎತ್ತುವ ಮತ್ತು ಕುಸ್ತಿ ಸ್ಪರ್ಧೆಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಕ್ರೀಡಾಪಟುಗಳು ಭಾಗವಹಿಸಿದ್ದರು. ಸಾರ್ವಜನಿಕರು ಬಿಸಿಲಿನ ತಾಪವನ್ನು ಲೆಕ್ಕಿಸದೆ ಕುತೂಹಲದಿಂದ ಈ ಸ್ಪರ್ಧೆಗಳನ್ನು ವೀಕ್ಷಿಸಿ, ಚಪ್ಪಾಳೆ ಹಾಗೂ ಸಿಳ್ಳು ಹಾಕುವ ಮೂಲಕ ಸ್ಪರ್ಧಾಳುಗಳನ್ನು ಹುರಿದುಂಬಿಸುತ್ತಿರುವುದು ಕಂಡುಬತು.

★ಸಂಗ್ರಹಣೆ ಕಲ್ಲು ಎತ್ತುವ ಸ್ಪರ್ಧೆಯ ವಿಜೇತರು:★ ಸಂಗ್ರಾಣಿ ಕಲ್ಲು ಎತ್ತುವ ಸ್ಪರ್ಧೆಯಲ್ಲಿ ಸುಮಾರು 100 ಕ್ಕೂ ಅಧಿಕ ಸಂಖ್ಯೆಯಲ್ಲಿ ಸ್ಪರ್ಧಾಳುಗಳು ಭಾಗವಹಿಸಿದ್ದು, ಇದರಲ್ಲಿ ರಾಮು ತೆಲಂಗಾಣ ಅವರು ಪ್ರಥಮ ಸ್ಥಾನ ಪಡೆದುಕೊಂಡರು. ಅದೇ ರಿತಿ ಪ್ರತಾಪ್ ನಾಯಕ ನಾಗನದೊಡ್ಡಿ ದ್ವಿತೀಯ ಮತ್ತು ಪ್ರಕಾಶ ಯಾದವ್ ಅವರು ತೃತೀಯ ಸ್ಥಾನವನ್ನು ಪಡೆದುಕೊಂಡರು.

★ಉಸುಕಿನ ಮೂಟೆ ಎತ್ತುವ ಸ್ಪರ್ಧೆ:★ ಉಸುಕಿನ ಮೂಟೆ ಎತ್ತುವ ಸ್ಪರ್ಧೆಯಲ್ಲಿ ಸುಮಾರು 30 ಕ್ಕೂ ಅಧಿಕ ಹೆಚ್ಚು ಸ್ಪರ್ಧಾಳುಗಳು ಭಾಗವಹಿಸಿದ್ದು, ಇದರಲ್ಲಿ ಮರಿಯಪ್ಪ ಅವರು 230 ಕೆಜಿ ಉಸುಕಿನ ಮೂಟೆ ಎತ್ತುವ ಮೂಲಕ ಪ್ರಥಮ ಸ್ಥಾನ ಪಡೆದರು. ಅದೇ ರಿತಿ ಸಕ್ರಪ್ಪ ನಾಯಕ ಅವರು 210 ಕೆಜಿ ಎತ್ತುವುದರೊಂದಿಗೆ ದ್ವಿತೀಯ ಸ್ಥಾನ ಪಡೆದರೆ, ಶಿವಕುಮಾರ ಅವರು 200 ಕೆಜಿ ತೃತೀಯ ಸ್ಥಾನವನ್ನು ಪಡೆದುಕೊಂಡರು.

★ಕುಸ್ತಿ ಸ್ಪರ್ಧೆಯ ವಿಜೇತರು:★ ಕುಸ್ತಿ ಸ್ಪರ್ಧೆಯಲ್ಲಿ 56 ಕುಸ್ತಿಪಡುಗಳು ಭಾಗವಹಿಸಿದ್ದು, ಪುರುಷರ ಕುಸ್ತಿ ಸ್ಪರ್ಧೆಯಲ್ಲಿ 'ಬಸವರಾಜ ಪಾಟೀಲ್ ಅವರು ಎಡೆದೊರೆ ಕಂಠೀರವ, ಹನುಮಂತ ಮರಮ್ಮನಹಳ್ಳಿ ಎಡೆದೊರೆ ಕೇಸರಿ, ಯೋಗೇಶ ಎಡೆದೊರೆ ಕಿಶೋರ ಹಾಗೂ ಮಾರುತಿ ಅವರು ಎಡೆದೊರೆ ಕುಮಾರ ಕುಸ್ತಿ ಗಧೆ ಗೆದ್ದರು. ಮಹಿಳೆಯರ ಕುಸ್ತಿ ಸ್ಪರ್ಧೆಯಲ್ಲಿ ಜಲಜಾಕ್ಷಿ ಎಸ್ ಅವರು ಎಡೆದೊರೆ ಕಿಶೋರಿ ಮತ್ತು ಸತ್ಯಶ್ರೀ ಅವರು ಎಡೆದೊರೆ ಕುಮಾರಿ ಕುಸ್ತಿ ಗಧೆ ಪಡೆದುಕೊಂಡರು.





ಶ್ವಾನಗಳ ವೀಕ್ಷಣೆ ಮಾಡಿದ ಸಚಿವರು, ಸಂಸದರು ಹಾಗೂ ಶಾಸಕರು

ಪ್ರಾಣಿಗಳ ಮೇಲೆ ದಯೆ ಇರಲಿ: ಸಚಿವರಾದ ಭೋಸರಾಜು ಸಲಹೆ

ರಾಯಚೂರು ಫೆ.06

ಶ್ವಾನಗಳು ಸೇರಿದಂತೆ ಎಲ್ಲ ಪ್ರಾಣಿಗಳ ಮೇಲೆ ದಯಾ ಭಾವ ಇರಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದರು.



ಫೆ.06ರ ಶುಕ್ರವಾರ ದಂದು ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಆವರಣದಲ್ಲಿ ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪಶುಪಾಲನಾ ಇಲಾಖೆ ಹಾಗೂ ಕರ್ನಾಟಕ ಪಶುವೈದ್ಯಕೀಯ ಸಂಘ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ವಾನಗಳ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರಾಣಿ ಹಿಂಸೆ ವಿರುದ್ಧ ಜಾಗೃತಿ ಮೂಡಿಸುವುದು, ಶ್ವಾನಗಳ ಆರೈಕೆ, ಆಹಾರ, ಲಸಿಕೆ ಮತ್ತು ವೈದ್ಯಕೀಯ ಚಿಕಿತ್ಸೆ ಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅತ್ಯಗತ್ಯ ಎಂದು ಹೇಳಿದರು.

ಈ ವೇಳೆ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ರಾಯಚೂರು ಉತ್ಸವ ಅಂಗವಾಗಿ ವಿವಿಧ ತಳಿಯ ಶ್ವಾನಗಳ ಪ್ರದರ್ಶನ ಸೇರಿದಂತೆ ಹತ್ತಾರು ಕಾರ್ಯಕ್ರಮಗಳ ನೋಡುವ ಭಾಗ್ಯ ಜಿಲ್ಲೆಯ ಸಾರ್ವಜನಿಕರಿಗೆ ಸಿಕ್ಕಿದೆ. ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಿ ಉತ್ಸವದ ಯಶಸ್ವಿಗೆ ಪ್ರತಿಯೊಬ್ಬರು ಪಾತ್ರ ವಹಿಸಬೇಕು ಎಂದರು.

150 ಶ್ವಾನಗಳ ನೋಂದಣಿ: ರಾಯಚೂರು ಜಿಲ್ಲಾ ಉತ್ಸವದ ಅಂಗವಾಗಿ ಏರ್ಪಡಿಸಲಾಗಿದ್ದ ಶ್ವಾನ ಪ್ರದರ್ಶನದಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕಿನಿಂದ

3ನೇ ಪುಟಕ್ಕೆ

ಶಿಶುನಾಳ ಶರೀಫರ ಜಾನಪದ ಗೀತೆಯ ಸಂಭ್ರಮ ಪಿಕಳಿಹಾಳ ಅಯ್ಯಪ್ಪ ಸ್ವಾಮಿ ಹಿರೇಮಠರ ಮನಮುಟ್ಟಿದ ಗಾಯನ





ರಾಯಚೂರು, ಫೆ.6-

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ2026ರ ಅಂಗವಾಗಿ ನಗರದ ಕೃಷಿ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರ ಸಭಾಂಗಣದಲ್ಲಿ ಜಾನಪದ ಸಂಗೀತ ಕಾರ್ಯಕ್ರಮ ನಡೆಯಿತು. ಪಿಕಳಿಹಾಳ ಅಯ್ಯಪ್ಪ ಸ್ವಾಮಿ ಹಿರೇಮಠ ಅವರು ಶಿಶುನಾಳ ಶರೀಫರ ಜಾನಪದ ಗೀತೆಯನ್ನು ಭಾವಪೂರ್ಣವಾಗಿ ಹಾಡಿ ಮೆಚ್ಚುಗೆ ಪಡೆದರು. ವೀರೇಂದ್ರಕುಮಾರ ಕುರ್ಡಿ (ಕ್ಯಾಶಿಯೋ), ಸುಧಾಕರ ಅಸ್ಕಿಹಾಳ (ರಿಥಮ್ ಪ್ಯಾಡ್) ಹಾಗೂ ಎ.ಎಸ್. ರಘುಕುಮಾರ (ತಬಲಾ) ವಾದ್ಯ ಸಾಥಿ ನೀಡಿದರು.

ಕಾರ್ಯಕ್ರಮದ ಬಳಿಕ ಅಧಿಕಾರಿಗಳು ಅಯ್ಯಪ್ಪ ಸ್ವಾಮಿ ಅವರನ್ನು ಸನ್ಮಾನಿಸಿದರು. ಮಾತನಾಡಿದ ಅವರು, ಜಿಲ್ಲಾ ಉತ್ಸವಗಳು ಕಲಾವಿದರಿಗೆ ಗುರುತಿನ ಅವಕಾಶ ನೀಡುತ್ತವೆ, ಬಡ ಕಲಾವಿದರಿಗೆ ಗೌರವಧನ ಸಹಾಯಕವಾಗುತ್ತದೆ. ರಾಯಚೂರಲ್ಲಿಯೂ ಜಿಲ್ಲಾ ಉತ್ಸವವನ್ನು ಪ್ರತಿವರ್ಷ ನಡೆಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು, ಹಿರಿಯ ಕಲಾವಿದರು ಹಾಗೂ ಛಾಯಾ ಗ್ರಾಹಕರು ಉಪಸ್ಥಿತರಿದ್ದರು.

ವಿಶ್ವ ಕ್ಯಾನ್ಸರ್ ದಿನಾಚರಣೆ ಅಂಗವಾಗಿ ಜನ ಜಾಗೃತಿ ಜಾಥಾ ಯಶಸ್ವಿ



ಕೊಪ್ಪಳ,ಫೆ.06-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಅಧಿಕಾರಿಗಳ ಕಛೇರಿ, ಜಿಲ್ಲಾ ಎನ್.ಸಿ.ಡಿ ಕೋಶ, ಇಂಡಿಯನ್ ಕ್ಯಾನ್ಸರ್ ಸೊಸೈಟಿ ಮತ್ತು ಬಸವಶ್ರೀ ಪ್ಯಾರಾಮೆಡಿಕಲ್ ಕಾಲೇಜ್, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಫೆ.4 ರಂದು ಹಳೇ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ವಿಶ್ವ ಕ್ಯಾನ್ಸರ್ ದಿನಾಚರಣೆಯ ಅಂಗವಾಗಿ ಜನ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾ ಅಸಾಂಕ್ರಾಮಿಕ ರೋಗಗಳ ನಿಯಂತ್ರಣಾಧಿಕಾರಿ ಡಾ. ಪ್ರಕಾಶ ಹೆಚ್., ಪ್ರತಿ ವರ್ಷ ಫೆಬ್ರವರಿ 4 ರಂದು ವಿಶ್ವ ಕ್ಯಾನ್ಸರ್ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಇದರ ಉದ್ದೇಶ ಕ್ಯಾನ್ಸರ್ ರೋಗದ ಬಗ್ಗೆ ಅರಿವು ಮೂಡಿಸಿ, ಮೂಢನಂಬಿಕೆ ತೊಲಗಿಸಿ, ಜನರಲ್ಲಿ ಆರೋಗ್ಯ ಪೂರ್ಣ ಜೀವನಶೈಲಿ ಮತ್ತು ಉತ್ತಮ ಆಹಾರ ಪದ್ದತಿ ರೂಡಿಸಿಕೊಳ್ಳುವ ಬಗ್ಗೆ ಜಾಗೃತಿ ಮೂಡಿಸಲಾಗುತ್ತದೆ. ಈ ಕಾರ್ಯಕ್ರಮವನ್ನು ಮೊದಲು 2011ರಲ್ಲಿ ಪ್ರಾರಂಭಿಸಲಾಯಿತು. ಕ್ಯಾನ್ಸರ್ ಖಾಯಿಲೆ ಹರಡುವ ರೀತಿ, ಲಕ್ಷಣಗಳು ಅದರ ಮುಂಜಾಗ್ರತಾ ಕ್ರಮಗಳ ಕುರಿತು, ಸಾರ್ವಜನಿಕರಿಗೆ ಅರಿವು ಮೂಡಿಸುವುದು ನಮ್ಮೆಲ್ಲರ ಕರ್ತವ್ಯ. ಮುಖ್ಯವಾಗಿ ಈ ರೋಗವು ಅಸಾಂಕ್ರಾಮಿಕ ರೋಗಗಳಲ್ಲಿ ಒಂದಾಗಿದ್ದು, ಸಾಮಾನ್ಯವಾಗಿ ಪುರುಷರಲ್ಲಿ ಬಾಯಿ ಕ್ಯಾನ್ಸರ್, ಶ್ವಾಸಕೋಶ ಕ್ಯಾನ್ಸರ್, ಅನ್ನನಾಳ ಕ್ಯಾನ್ಸರ್ ಹಾಗೂ ಮಹಿಳೆಯರಲ್ಲಿ ಗರ್ಭಕಂಠದ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಬಾಯಿ ಕ್ಯಾನ್ಸರ್ ಬರುವ ಸಾಧ್ಯತೆ ಇರುತ್ತದೆ. ವಾಸಿಯಾಗದ ಗಾಯ, ಅಸಹಜ ರಕ್ತಸ್ರಾವ, ಬಹಳ ದಿನಗಳ ಕೆಮ್ಮು, ನೋವಿಲ್ಲದ ಗಡ್ಡೆ, ಊತ ಇವು ಕ್ಯಾನ್ಸರ್ ರೋಗದ ಲಕ್ಷಣಗಳಾಗಿದ್ದು, ಇವುಗಳ ಬಗ್ಗೆ ನಿರ್ಲಕ್ಷ್ಯ ಮಾಡದೇ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ವೈದ್ಯರ ಹತ್ತಿರ ಪರೀಕ್ಷಿಸಿಕೊಂಡು ಚಿಕಿತ್ಸೆ ಪಡೆದುಕೊಳ್ಳಬೇಕು. ಮುಂಜಾಗೃತಾ ಕ್ರಮವಾಗಿ ಆರೋಗ್ಯಕರ ಜೀವನ ಶೈಲಿ ನಡೆಸಬೇಕು. ಸಿರಿಧಾನ್ಯಗಳಿಂದ ತಯಾರಿಸಿದ ಆಹಾರ ಸೇವನೆ, ಹಾಲು ಮತ್ತು ಹಾಲಿನ ಉತ್ಪನ್ನಗಳ ಹೆಚ್ಚು ಬಳಕೆ ಮಾಡುವುದು, ಕ್ಯಾನ್ಸರ್ ಪ್ರತಿರೋಧಕ ಶಕ್ತಿಯಿರುವ ಆಹಾರ ಪದಾರ್ಥಗಳ ಬಳಕೆ, ಆಹಾರದಲ್ಲಿ ಹೆಚ್ಚಿನ ರೀತಿಯ ತರಕಾರಿ/ಹಣ್ಣು ಹಂಪಲುಗಳ ಬಳಕೆ ಮಾಡುವ ಬಗ್ಗೆ ಹಾಗೂ ಬಣ್ಣಗಳಿಂದ ಕೂಡಿದ ಆಹಾರ ಪದಾರ್ಥಗಳ ಬಳಕೆ (ಉದಾ: ಬೇಕರಿ ಪದಾರ್ಥ, ಗೋಬಿ, ಮುಂತಾದವು..) ಮಾಡದಂತೆ ಎಲ್ಲಾ ವಿದ್ಯಾರ್ಥಿಗಳು ಮತ್ತು ಕ್ಷೇತ್ರ ಸಿಬ್ಬಂದಿಗಳು ತಮ್ಮ ಕಾರ್ಯಕ್ಷೇತ್ರದ ವ್ಯಾಪ್ತಿಯ ವಾರ್ಡ್, ಗ್ರಾಮಗಳಲ್ಲಿ ಮತ್ತು ನಗರ ಪ್ರದೇಶದ ಕೊಳಚೆ ಪ್ರದೇಶಗಳಲ್ಲಿ ಕ್ಯಾನ್ಸರ್ ಖಾಯಿಲೆಯ ನಿಯಂತ್ರಣ ಕುರಿತು, ಅರಿವು ಮೂಡಿಸಿ, ಮುಂಜಾಗೃತೆ ವಹಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ತಾಲೂಕಾ ಆರೋಗ್ಯಾಧಿಕಾರಿ ಡಾ. ರಾಮಾಂಜನೇಯ ಮಾತನಾಡಿ, ಜೀವನಶೈಲಿಯಿಂದ ಬರುವ ಅಸಾಂಕ್ರಾಮಿಕ ರೋಗಗಳಲ್ಲಿ ಕ್ಯಾನ್ಸರ್ ಖಾಯಿಲೆ ಒಂದಾಗಿದ್ದು, ''ವಿಶಿಷ್ಠತೆಯಿಂದ ಏಕತೆ'' ಎಂಬ ಈ ವರ್ಷದ ಘೋಷವಾಕ್ಯದೊಂದಿಗೆ ಕ್ಯಾನ್ಸರ್ ಖಾಯಿಲೆ ನಿಯಂತ್ರಣ ಕುರಿತು, ಜಾಗೃತಿ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಮುಂದಿನ ದಿನಗಳಲ್ಲಿ 9-14 ವರ್ಷದೊಳಗಿನ ಹೆಣ್ಣು ಮಕ್ಕಳಿಗೆ ಗರ್ಭಕಂಠದ ಕ್ಯಾನ್ಸರ್ ತಡೆಯಲು ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಎಚ್‌ಪಿವಿ ಲಸಿಕೆ ನೀಡಲಾಗುತ್ತದೆ. ನಾವು ಸೇವಿಸುವ ಆಹಾರ ಪದಾರ್ಥಗಳ ಮೂಲಕ ಮತ್ತು ಪ್ಲಾಸ್ಟಿಕ್ ನೀರಿನ ಬಾಟಲಿಗಳ ಮೂಲಕ ಕ್ಯಾನ್ಸರ್ ಹರಡುವ ಸಾಧ್ಯತೆ ಇರುತ್ತದೆ ಇದರ ಬಗ್ಗೆ ಎಚ್ಚರಿಕೆ ವಹಿಸಬೇಕು ಮತ್ತು ಯುವಕರು ತಂಬಾಕು ಸೇವನೆ, ಮದ್ಯಪಾನ ಸೇವನೆಗಳಿಂದ ದೂರವಿದ್ದು, ಕ್ಯಾನ್ಸರ್ ಖಾಯಿಲೆ ಹರಡುವ ಬಗ್ಗೆ ಮತ್ತು ನಿಯಂತ್ರಣ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ, ಕ್ಯಾನ್ಸರ್ ಮುಕ್ತ ಸಮಾಜ ನಿರ್ಮಾಣ ಮಾಡಲು ಸಹಕರಿಸುವಂತೆ ತಿಳಿಸಿದರು. ನಂತರ ಹಳೇ ಜಿಲ್ಲಾ ಆಸ್ಪತ್ರೆ ಆವರಣದಿಂದ ಪ್ರಾರಂ ಭವಾಗಿ ಕೇಂದ್ರ ಬಸ್ ನಿಲ್ದಾಣ, ಡಾ.ಸಿಂಪಿಲಿಂಗಣ್ಣ ರಸ್ತೆ, ನಗರ ಪೊಲೀಸ್ ಠಾಣೆ, ದಿವಟರ್ ಸರ್ಕಲ್, ಅಶೋಕ್ ವೃತ್ತ ಮಾರ್ಗವಾಗಿ ನಡೆದ ಜನ ಜಾಗೃತಿ ಜಾಥಾದಲ್ಲಿ ಕ್ಯಾನ್ಸರ್ ಖಾಯಿಲೆ ನಿಯಂತ್ರಣ ಕುರಿತು, ವಿದ್ಯಾರ್ಥಿಗಳು ನಾಮಫಲಕಗಳನ್ನು ಹಿಡಿದುಕೊಂಡು ಘೋಷಣೆಗಳನ್ನು ಕೂಗುತ್ತಾ, ಸಾರ್ವಜನಿಕರಿಗೆ ಅರಿವು ಮೂಡಿಸಿ, ಪುನಃ ಹಳೇ ಜಿಲ್ಲಾ ಆಸ್ಪತ್ರೆ ಆವರಣಕ್ಕೆ ಆಗಮಿಸಿ, ಕಾರ್ಯಕ್ರಮ ಮುಕ್ತಾಯಗೊಳಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಸ್ಪತ್ರೆಯ ಎನ್.ಸಿ.ಡಿ ಕಾರ್ಯಕ್ರಮದ ಫಿಜಿಷಿಯನ್ ಡಾ. ಶರಣಪ್ಪ, ಎನ್.ಸಿ.ಡಿ ಕಾರ್ಯಕ್ರಮದ ಜಿಲ್ಲಾ ಸಲಹೆಗಾರರಾದ ಡಾ. ಜಯಶ್ರೀ ಎಮ್.ಹೆಚ್., ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿಗಳಾದ ಡಾ. ಮಹೇಶ ಉಮಚಗಿ, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಎಲ್.ವ್ಹಿ. ಸಜ್ಜನರ್, ಬಸವಶ್ರೀ ಪ್ಯಾರಾಮೆಡಿಕಲ್ ಕಾಲೇಜಿನ ಬೋಧಕರು ಮತ್ತು ವಿದ್ಯಾರ್ಥಿಗಳು, ಇಂಡಿಯನ್ ಕ್ಯಾನ್ಸರ್ ಸೊಸೈಟಿಯ ಪದಾಧಿಕಾರಿಗಳು ಹಾಗೂ ವಿವಿಧ ವೃಂದದ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು ಹಾಗೂ ಇತರೆ ಸಿಬ್ಬಂದಿಗಳು ಭಾಗವಹಿಸಿದ್ದರು.

ದೇಶ ರಕ್ಷಣೆಗೆ ನಾವೆಲ್ಲರೂ ಶ್ರೀರಾಮನ ನಾಮ ಪಠಿಸೋಣ- ಶ್ರೀ ಸತ್ಯಾತ್ಮತೀರ್ಥರು



ಕೆಂಭಾವಿ,ಫೆ.05-

ದೇಶದ ಸಂಸ್ಕೃತಿ ರಕ್ಷಣೆ, ಸನಾತನ ಧರ್ಮದ ರಕ್ಷಣೆ, ದೇಶ ರಕ್ಷಣೆಗೆ ನಾವೆಲ್ಲರೂ ಶ್ರೀರಾಮನ ನಾಮನವನ್ನು ನಿತ್ಯ ಪಠಿಸಬೇಕು ಎಂದು ಉತ್ತರಾದಿ ಮಠಾಽಶ ಶ್ರೀ ಸತ್ಯಾತ್ಮತೀರ್ಥ ಸ್ವಾಮಿಗಳು ಹೇಳಿದರು. ಪಟ್ಟಣದ ಉತ್ತರಾದಿ ಮಠದ ಪ್ರಥಮ ವರ್ಧಂತಿ ಉತ್ಸವದ ನಿಮಿತ್ಯ ಬುಧವಾರ ಸಂಜೆ ಪಟ್ಟಣಕ್ಕೆ ಆಗಮಿಸಿದ ಶ್ರೀಗಳು ಮಹಾಮಂಗಳಾ ರತಿ ನೆರವೇರಿಸಿ ಆಶೀರ್ವಚನ ನೀಡಿದ ಶ್ರೀ ಸತ್ಯಾತ್ಮರು, ರಾಮ ಎಂಬ ಶಬ್ದ ದಲ್ಲಿ ಸಾವಿರಾರು ಅರ್ಥಗಳು ಅಡಗಿದ್ದು ಅಂಥಾ ರಾಮನಾಮ ಸ್ಮರಣೆಯಿಂದ ದೇಶದ ಸಂಸ್ಕೃತಿ, ದೇಶದ ರಕ್ಷಣೆ ಉಂಟಾಗುತ್ತದೆ ಎಂದರು. ನಂತರ ನೆರೆದಿದ್ದ ನುರಾರು ಭಕ್ತ ಜನತೆಗೆ ಶ್ರೀ ರಾಮನಾಮ ಉಪದೇಶಿಸಿ ಫಲಮಂತ್ರಾಕ್ಷತೆ ನೀಡಿ ದರು.

ನೂತನ ಕಟ್ಟಡ ವೀಕ್ಷಣೆ-ಇದೇ ಸಂದರ್ಭದಲ್ಲಿ ಶ್ರೀ ಸತ್ಯಾತ್ಮ ತೀರ್ಥರು ಉತ್ತರಾದಿ ಮಠ ಕಲ್ಯಾಣ ಮಂಟಪದ ಎರಡನೆ ಮಹಡಿಯ ಕಟ್ಟಡ ವೀಕ್ಷಿಸಿ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದರು. ಕಟ್ಟಡದ ಸರಿಯಾದ ಕೆಲಸ ನಿರ್ವಹಿಸಿ ವ್ಯವಸ್ಥಿತವಾದ ಅನುಕೂಲತೆಗಳನ್ನು ಕಲ್ಪಿಸಿ ಶೀಘ್ರ, ಸಮಾಜ ಸೇವೆಗೆ ಒದಗಿಸುವಂತೆ ಸೂಚನೆ ನೀಡಿದರು. ಮಠಕ್ಕೆ ತಮ್ಮ ಸ್ವಂತ ಜಾಗವನ್ನು ದಾನ ಮಾಡಿದ ನಿವೃತ್ತ ಶಿಕ್ಷಕ ಪ್ರಹ್ಲಾದಾಚಾರ್ಯ ಜೋಷಿ, ಭೀಮಸೇನಾಚಾರ್ಯ ಜೋಷಿ ಅವರನ್ನು ಶ್ರೀಗಳು ಫಲ ಮಂತ್ರಾಕ್ಷತೆ ನೀಡಿ ಆಶೀರ್ವದಿಸಿದರು.

ವಾಮನರಾವ ದೇಶಪಾಂಡೆ, ಬಾಳಕೃಷ್ಣರಾವ ಕುಲಕರ್ಣಿ, ತಿರುಮಲಾಚಾರ್ಯ ಜೋಷಿ, ನರಸಿಂಹರಾವ ಕುಲಕರ್ಣಿ, ಮೋಹನರಾವ ಕುಲಕರ್ಣಿ, ಹಣಮಂತರಾವ ಕುಲಕರ್ಣಿ, ಶೇಷಗಿರಿರಾವ ಕುಲಕರ್ಣಿ, ಡಾ. ಹಳ್ಳೇರಾವ ಕುಲಕರ್ಣಿ, ವೆಂಕಟೇಶ ನಾಡಿಗೇರ, ವಲ್ಲಭಭಟ್ಟ ಜೋಷಿ, ಮಲ್ಲಾರಾವ ಕುಲಕರ್ಣಿ, ಡಾ. ಗಿರೀಶ ಕುಲಕರ್ಣಿ ಸೇರಿದಂತೆ ಹಲವರಿದ್ದರು.



ಟೀಕಿನಮಠದ ನೂತನ ಶ್ರೀಗಳ ಚರಪಟ್ಟಾಧಿಕಾರ ಮಹೋತ್ಸವ

ರಾಜ್ಯಕ್ಕೆ ಟೀಕಿನಮಠದ ಕೊಡುಗೆ ಅಪಾರ: ಸ್ವಾಮೀಜಿ

ಬಾಗಲಕೋಟೆ,ಫೆ.05-

ರಾಷ್ಟ್ರಕಾರ್ಯಕ್ಕೆ ರಾಷ್ಟ್ರಧ್ವಜ,ಧರ್ಮಕಾರ್ಯಕ್ಕೆ ಧರ್ಮ ಧ್ವಜಾರೋಹಣ ಸಂಪ್ರದಾಯವಾಗಿದ್ದು.ರಾಜ್ಯಕ್ಕೆ ಟೀಕಿನಮಠದ ಕೊಡುಗೆ ಅಪಾರವಾಗಿದೆ ಎಂದು ಬೆಳಗಾವಿ ಕಾರಂಜಿಮಠ ಗುರುಸಿದ್ದಮಹಾಸ್ವಾಮಿಗಳು ಹೇಳಿದರು.

ನಗರ ಚರಂತಿಮಠ ಶಿವಾನುಭವ ಮಂಟಪದ ಆವರಣದಲ್ಲಿ ಗುರುವಾರ ಷಟಸ್ಥಳ ಧ್ವಜಾರೋಹಣ ಮಾಡುವ ಮೂಲಕ ಟೀಕಿನಮಠದ ನೂತನ ಶ್ರೀಗಳ ಚರಪಟ್ಟಾಧಿಕಾರ ಮಹೋತ್ಸವದ ಧಾರ್ಮಿಕ ಕಾರ್ಯಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು ರಾಷ್ಟ್ರದ ಕಾರ್ಯಕ್ಕೆ ರಾಷ್ಟ್ರಧ್ವಜ, ಧಾರ್ಮಿಕ ಕಾರ್ಯಕ್ಕೆ ಧರ್ಮ ಧ್ವಜ, ಈ ರಾಷ್ಟ್ರಧ್ವಜ ಧರ್ಮಧ್ವಜ ಎರಡೂ ಕೂಡ ಅಮೂಲ್ಯ ಮತ್ತು ಮಹತ್ವವುಳ್ಳದ್ದಾಗಿದೆ, ಷಟ್‌ಸ್ಥಳ ಎಂದರೆ 6 ಮೆಟ್ಟಲುಗಳುಳ್ಳದ್ದು ಭಕ್ತ, ಮಹಿಶ, ಪ್ರಸಾಧಿ, ಪ್ರಾನಲಿಂಗಿ, ಶರಣ ಐಕ್ಯ ಇವು ಒಂದೊಂದು ಮೆಟ್ಟಿಲಗಳನ್ನು ನಾವೆಲ್ಲರೂ ಸಾಧನೆ ಮೂಲಕ ಏರಿ ಜೀವ ಶಿವನಾಗುವುದಕ್ಕೆ ಮಾರ್ಗದರ್ಶನ, ಷಟಸ್ಥಳ ಧ್ವಜಾರೋಹಣ ಮಾಡುವ ಮೂಲ ಉದ್ದೇಶ ಮನುಷ್ಯನ ಜೀವನದ ಸಾರ್ಥಕತೆ ಪ್ರತಿಯೊಬ್ಬರಿಗೂ ಗೊತ್ತಾಗಬೇಕು, ಮನುಷ್ಯ ಪ್ರತಿಯೊಬ್ಬ ವ್ಯಕ್ತಿಯು ಮುಕ್ತನಾಗಬೇಕಾದರೆ ಭಕ್ತಸ್ಥಳದಿಂದ ಸಾಧನೆ ಮಾಡುತ್ತಾ ಐಕ್ಯಸ್ಥಳ ಮುಟ್ಟಲು ಎಲ್ಲರಿಗೂ ಸಾಧ್ಯ ಎಂದು ತೋರಿಸಿಕೊಟ್ಟವರು ನಮ್ಮ ಬಸವಾದಿ ಶರಣರು, ಆ ಪರಂಪರೆ ಇಂದಿಗೂ ನಡೆದು ಕೊಂಡು ಬಂದಿದೆ, ಟೀಕಿನಮಠ ಬಹಳ ಪರಂಪರೆಯುಳ್ಳದ್ದು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ನಾಲ್ಕನೆಯ ಮಹಾಸಭೆ, ಶಿವಯೋಗ ಮಂದಿರ ಸಂಸ್ಥೆ ಹಾಗೂ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘ ಸ್ಥಾಪನೆಗೊಳ್ಳಲು ಟೀಕಿನಮಠ ಪ್ರೇರಣೆಯಾಗಿದೆ, ಇಲ್ಲಿನ ಶ್ರೀಗಳ ಕೊಡುಗೆ ಅಪಾರವಾಗಿದೆ, ಟೀಕಿನ ಮಠ ನೂತನ ಶ್ರೀಗಳ ಪಟ್ಟಾಧಿಕಾರ ಮಹೋತ್ಸವ ಸಂಭ್ರಮದಿಂದ ನಡೆದಿರುವುದು ಬಾಗಲಕೋಟೆ ಸಾಂಸ್ಕೃತಿಕ ಲೋಕದ ಅನಾವರಣಗೊಂಡಿದೆ ಎಂದರು.

ಚರಂತಿಮಠದ ಪ್ರಭುಮಹಾಸ್ವಾಮಿಗಳು ಷಟಸ್ಥಳ ಧ್ವಜಾರೋಹಣವು ವೀರಶೈವ ಲಿಂಗಾಯತ ಮಠಗಳ ಧಾರ್ಮಿಕ ಕಾರ್ಯಕ್ರಮಗಳ ಆಚರಣೆಯ ಆರಂಭವನ್ನು ಸೂಚಿಸುವ ಪವಿತ್ರ ಆಚರಣೆಯಾಗಿದೆ ಎಂದರು.

ಗುಳೆದಗುಡ್ಡದ ಒಪ್ಪತ್ತೇಶ್ವರಮಹಾಸ್ವಾಮಿಗಳು, ಟೀಕಿನ ಮಠದ ಮಲ್ಲಿಕಾರ್ಜುನ ದೇಸಿಕರ ಸ್ವಾಮಿಗಳು, ಅನವಾಲದ ಕೈಲಾಸಪತಿಸ್ವಾಮಿಗಳು,ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ಸ್ವಾಮಿಗಳು,ತಾರಿಹಾಳ ಅಡವಿಸಿದ್ದೇಶ್ವರ ದೇವರು,

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿ.ಎನ್.ಪಾಟೀಲ,ಎ.ಎಸ್.ಪಾವಟೆ. ಬಸವಾರಾಜ ಭಗವತಿ, ಚಂದ್ರಶೇಖರ ಶೆಟ್ಟರ, ಸೇರಿದಂತೆ ಅನೇಕರು ಭಾಗವಹಿಸದ್ದರು,

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಿಂದ ಕಾಲೇಜು ವಿದ್ಯಾರ್ಥಿನಿಯರೊಂದಿಗೆ ಸಂವಾದ ಕಾರ್ಯಕ್ರಮ

ಶಿಕ್ಷಣವೇ ಮಹಿಳೆಯರ ಶಕ್ತಿ, ಯಶಸ್ವಿ ಬದುಕಿಗೆ ಶಿಕ್ಷಣವೇ ಮಾರ್ಗದರ್ಶಿ: ಡಾ.ನಾಗಲಕ್ಷ್ಮೀ ಚೌಧರಿ



ಕೊಪ್ಪಳ ,ಫೆ.06-

ಅರಿವೇ ಬದುಕು, ಅಜ್ಞಾನವೇ ಸಾವು ಎಂಬ ಮಾತಿನಂತೆ ಶಿಕ್ಷಣದಿಂದ ಮಾತ್ರ ನಮಗೆ ಪ್ರಪಂಚ ಜ್ಞಾನ ಬೆಳೆಯಲು ಸಾಧ್ಯ. ಶಿಕ್ಷಣವನ್ನು ಶಕ್ತಿಯಾಗಿಸಿಕೊಂಡು ಪರಿಶ್ರಮದಿಂದ ಯಶಸ್ವಿಯಾಗಬಹುದು. ಮಹಿಳೆಯರು ಸುಶಿಕ್ಷಿತರಾಗಲೇಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ವಿದ್ಯಾರ್ಥಿನಿಯರಿಗೆ ತಿಳಿಸಿದರು.

ಗುರುವಾರದಂದು ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಆಯೋಗದ ಅಧ್ಯಕ್ಷರು ಹಾಗೂ ಜಿಲ್ಲೆಯ ಕಾಲೇಜು ವಿದ್ಯಾರ್ಥಿನಿಯರೊಂದಿಗಿನ ಸಂವಾದ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಶಿಕ್ಷಣ ನಮಗೆ ಜ್ಞಾನವನ್ನು ನೀಡುತ್ತದೆ. ಪ್ರಪಂಚದ ಆಗುಹೋಗುಗಳನ್ನು ಪರಿಚಯಿಸುತ್ತದೆ. ನಮ್ಮ ಹಕ್ಕುಗಳು, ಕರ್ತವ್ಯ, ಜವಾಬ್ದಾರಿಯ ಬಗ್ಗೆ ತಿಳಿಸುತ್ತದೆ. ಭವಿಷ್ಯಕ್ಕೆ ಮಾರ್ಗದರ್ಶಿಯಾಗಿರುತ್ತದೆ. ಆದ್ದರಿಂದ ಪ್ರತಿಯೊಬ್ಬ ಮಹಿಳೆಯರೂ ಕಡ್ಡಾಯವಾಗಿ ಶಿಕ್ಷಣವನ್ನು ಪಡೆಯಲೇಬೇಕು. ಶಿಕ್ಷಣವನ್ನು ಶಕ್ತಿಯಾಗಿ ಬಳಸಿಕೊಳ್ಳಬೇಕು. ಓದುವ ವಯಸ್ಸಿನಲ್ಲಿ ಅನಗತ್ಯ ಆಕರ್ಷಣೆ, ಆಮೀಷಕ್ಕೆ ಒಳಗಾಗದೇ ಶಿಕ್ಷಣಕ್ಕೆ ಮಾತ್ರ ಆದ್ಯತೆ ನೀಡಿ, ಪರಿಶ್ರಮದಿಂದ ಬದುಕಲ್ಲಿ ಯಶಸ್ವಿಯಾಗಬೇಕು. ಯಶಸ್ಸಿಗೆ ಯಾವುದೇ ಅಡ್ಡದಾರಿಗಳಿಲ್ಲ. ನಮ್ಮ ಶ್ರಮ ಮತ್ತು ಶ್ರದ್ದೆಯೇ ಯಶಸ್ಸಿನ ಮೂಲಮಂತ್ರ ಎಂದು ಅವರು ವಿದ್ಯಾರ್ಥಿನಿಯರಿಗೆ ತಿಳಿಸಿದರು.

ಪ್ರಸ್ತುತ ದಿನಗಳಲ್ಲಿ ಚಿಕ್ಕಮಕ್ಕಳಿಂದ ವೃದ್ಧರವರೆಗೂ ಅತ್ಯಂತ ಆಕರ್ಷಿತ ಮಾಧ್ಯಮವೆಂದರೆ ಇನ್‌ಸ್ಟಾಗ್ರಾಂ, ಫೇಸ್‌ಬುಕ್, ವಾಟ್ಸಪ್ ನಂತಹ ಸಾಮಾಜಿಕ ಮಾಧ್ಯಮಗಳು ಹಾಗೂ ರೀಲ್ಸ್‌ಗಳು. ಮಹಿಳೆಯರು ಭಾವನಾತ್ಮಕ ಜೀವಿಗಳಾದ್ದರಿಂದ ವಂಚಕರು ಇಂತಹ ಸಾಮಾಜಿಕ ಮಾಧ್ಯಮಗಳನ್ನು ದಾಳವಾಗಿಸಿಕೊಂಡು ಅಮಾಯಕ ಹುಡುಗಿಯರನ್ನು, ಮಹಿಳೆಯರನ್ನು ತಮ್ಮ ಬಲೆಗೆ ಬೀಳಿಸಿಕೊಂಡು, ನಂಬಿಸಿ, ಮೋಸ ಮಾಡುತ್ತಾರೆ. ಕೆಲ ಸಂದರ್ಭಗಳಲ್ಲಿ ಬ್ಲಾಕ್‌ಮೇಲ್ ಮಾಡಿ, ಹುಡುಗಿಯರನ್ನು ತಮ್ಮ ಇಷ್ಟದಂತೆ ಬಳಸಿಕೊಳ್ಳುತ್ತಾರೆ. ಇದರಿಂದ ಮೋಸ ಹೋದ ಹುಡುಗಿಯರು, ಮಹಿಳೆಯರು ಬೇಸತ್ತು ಜೀವವನ್ನೇ ಕಳೆದುಕೊಳ್ಳುತ್ತಾರೆ.

ಆದ್ದರಿಂದ ಪ್ರತಿಯೊಬ್ಬರೂ ಸಾಮಾಜಿಕ ಮಾಧ್ಯಮಗಳನ್ನು ಬಳಸುವಾಗ ಅತ್ಯಂತ ಎಚ್ಚರಿಕೆ ವಹಿಸಬೇಕು. ಅಪರಿಚಿತ ವ್ಯಕ್ತಿಯಿಂದ ಬರುವ ಸ್ನೇಹದ ಪ್ರಸ್ತಾಪಗಳನ್ನು ಒಪ್ಪಿಕೊಳ್ಳಬಾರದು, ಅಪರಿಚಿತರೊಂದಿಗೆ ಅನಗತ್ಯ ಸಂಪರ್ಕ ಬೆಳೆಸಬಾರದು. ಇಂದಿನ ಇಂಟರ್‌ನೆಟ್, ಸಾಮಾಜಿಕ ಮಾಧ್ಯಮಗಳ ಶಕ್ತಿಯನ್ನು ನಿಮ್ಮ ಶಿಕ್ಷಣಕ್ಕೆ, ಭವಿಷ್ಯಕ್ಕೆ ಪೂರಕವಾಗುವಂತೆ ಸಕಾರಾತ್ಮಕವಾಗಿ ಬಳಸಿಕೊಳ್ಳಿ. ಒಂದು ವೇಳೆ ಸೈಬರ್ ವಂಚನೆಗೆ ಒಳಗಾದಲ್ಲಿ ಸೈಬರ್ ಸಹಾಯವಾಣಿ ಸಂಖ್ಯೆ 1930 ಗೆ ಸಂಪರ್ಕಿಸಿ, ದೂರು ದಾಖಲಿಸಿ, ಸಮಸ್ಯೆಗೆ ಪರಿಹಾರ ಕಂಡುಕೊಳ್ಳಿ, ಮಕ್ಕಳ ಸಹಾಯವಾಣಿ 1098 ಗೆ ಅಥವಾ ಪೊಲೀಸ್ ಇಲಾಖೆ ಸಹಾಯವಾಣಿ ಸಂಖ್ಯೆ 112 ಗೆ ಕರೆ ಮಾಡಿ ಸಹಾಯ ಪಡೆದುಕೊಳ್ಳಬಹುದು ಎಂದು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.


ಸಂವಿಧಾನ ನಮಗೆ ಹಕ್ಕುಗಳನ್ನು ನೀಡಿದೆ. ಆದರೆ ಅವುಗಳನ್ನು ಬಳಸಿಕೊಳ್ಳುವ ಜ್ಞಾನ ನಮಗಿಲ್ಲ. ಆದ್ದರಿಂದ ಪ್ರತಿಯೊಬ್ಬರೂ ಸಂವಿಧಾನವನ್ನು ಅರಿತುಕೊಳ್ಳಬೇಕು. ಅಗತ್ಯ ಮೂಲಸೌಕರ್ಯಗಳನ್ನು ಪಡೆಯುವುದು ಪ್ರತಿಯೊಬ್ಬರ ಹಕ್ಕು. ಆದ್ದರಿಂದ ನಿಮ್ಮ ಹಕ್ಕುಗಳಿಗಾಗಿ ಹೋರಾಡಿ. ಅನ್ಯಾಯವಾದಾಗ ಪ್ರತಿಭಟಿಸುವ ಧೈರ್ಯ ಬೆಳೆಸಿಕೊಳ್ಳಿ. ಸರ್ಕಾರದಿಂದ ನೂರಾರು ಯೋಜನೆಗಳು ಜಾರಿಯಾಗಿದ್ದು, ಅವುಗಳನ್ನು ತಿಳಿದುಕೊಂಡು ನಿಮಗೆ ಅಗತ್ಯವಿರುವ ಸೌಲಭ್ಯಗಳನ್ನು ಸಂಬಂಧಿಸಿದ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಿ ಪಡೆದುಕೊಳ್ಳಿ. ಯಾವುದೇ ಸರ್ಕಾರಿ ಯೋಜನೆ ಯಶಸ್ವಿಯಾಗಬೇಕಾದರೆ ಅದನ್ನು ಬಳಸಿಕೊಳ್ಳುವ ಫಲಾನುಭವಿಗಳ ಜವಾಬ್ದಾರಿಯೂ ಮುಖ್ಯವಾಗುತ್ತದೆ. ಆದ್ದರಿಂದ ಯೋಜನೆಗಳ ಸಮರ್ಪಕ ಬಳಕೆ ಮಾಡಿಕೊಳ್ಳಿ. ನಮ್ಮ ಊರು, ನಮ್ಮ ಜಿಲ್ಲೆ, ನಮ್ಮ ರಾಜ್ಯ, ನಮ್ಮ ದೇಶದ ಬಗ್ಗೆ ಕನಿಷ್ಠ ಜ್ಞಾನವಾದರೂ ನಮಗಿರಬೇಕು. ಸರ್ಕಾರಿ ವ್ಯವಸ್ಥೆಯ ಕಾರ್ಯನಿರ್ವಹಣೆಯ ಪರಿಚಯವಿರಬೇಕು. ಆಗ ಮಾತ್ರ ಸರ್ಕಾರದ ಯೋಜನೆಯ ಸಮರ್ಪಕ ಲಾಭ ನಮಗೆ ದೊರೆಯುತ್ತದೆ ಎಂದು ಸರ್ಕಾರಿ ಯೋಜನೆಗಳನ್ನು ಬಳಸಿಕೊಳ್ಳುವ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ವಿದ್ಯಾರ್ಥಿಗಳು ಅಧ್ಯಕ್ಷರೊಂದಿಗೆ ಸಂವಾದ ನಡೆಸುತ್ತಾ ತಮ್ಮ ಊರು, ಕಾಲೇಜಿನಲ್ಲಿರುವ ಮೂಲಭೂತ ಸೌಕರ್ಯದ ಕೊರತೆಗಳ ಬಗ್ಗೆ ದೂರುಗಳನ್ನು ಸಲ್ಲಿಸಿದರು. ಇದಕ್ಕೆ ಸ್ಪಂದಿಸಿದ ಅಧ್ಯಕ್ಷರು ಸಂಬಂಧಿಸಿದ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಡಾ.ಸುರೇಶ ಬಿ.ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ದಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ವೈ.ಶೆಟ್ಟೆಪ್ಪನವರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಜಗದೀಶ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಕಾಲೇಜು ಉಪನ್ಯಾಸಕರು, ವಿದ್ಯಾರ್ಥಿಗಳು ಹಾಜರಿದ್ದರು.

ಜಿ.ಪಂ ಲಿಂಕ್ ಡಾಕ್ಯೂಮೆಂಟ್ ಅನುದಾನದ ಪ್ರಗತಿ ಪರಿಶೀಲನಾ ಸಭೆ

ಅನುದಾನ ಸಮರ್ಪಕ ಬಳಕೆಗೆ ಜಿ.ಪಂ ಸಿಇಓ ಸೂಚನೆ



ಬಾಗಲಕೋಟೆ,ಫೆ.05-

ಜಿಲ್ಲಾ ಪಂಚಾಯತ ಲಿಂಕ್ ಡಾಕ್ಯೂಮೆಂಟ್ ಅನುದಾನದಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ನಿಗದಿತ ಕಾಲಾವಧಿಯಲ್ಲಿ ಗುಣಮಟ್ಟದೊಂದಿಗೆ ಪೂರ್ಣಗೊಳಿಸುವಂತೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಗುರುವಾರ ಜಿ.ಪಂ ಲಿಂಕ್ ಡಾಕ್ಯೂಮೆಂಟರ್ ಅನುದಾನಗಳ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅನುದಾನ ಬಳಕೆಯಲ್ಲಿ ಪಾರದರ್ಶಕತೆ ಕಾಪಾಡಬೇಕು. ದುರಸ್ಥಿ ಕಾಮಗಾರಿಗಳಲ್ಲಿ ಗುಣಮಟ್ಟ ಕಾಣುತ್ತಿಲ್ಲ. ಪದೇ ಪದೇ ದುರಸ್ಥಿ ಕಾರ್ಯ ಮಾಡಲಾಗುತ್ತಿದೆ. ಈ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ದುರಸ್ಥಿ ಕಾರ್ಯದ ಬಗ್ಗೆ ಪರಿಶೀಲನೆ ನಡೆಸುವ ಅಗತ್ಯವಿದೆ ಎಂದು ತಿಳಿಸಿದರು.

ಕ್ರಿಯಾ ಯೋಜನೆ ಪ್ರಕಾರ ಕಾಮಗಾರಿಗೆ ಅನುಮತಿ ನೀಡಲಾಗಿರುತ್ತದೆ. ಅನುಮತಿ ನೀಡಿದರು ಟೆಂಡರ್ ಕರೆದು ಕಾರ್ಯಾದೇಶ ಕೊಡುವಲ್ಲಿ ಬಹಳ ವಿಳಂಬ ದೋರಣೆ ಅನುಸರಿಸುತ್ತಿದ್ದೀರಿ. ಈ ನಿಮ್ಮ ವರ್ತನೆಯಿಂದ ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳ್ಳದೇ ಇರುವದರಿಂದ ನೀವು ಕೈಗೊಂಡಿರುವ ಕ್ರೀಯಾ ಯೋಜನೆಕ್ಕಿಂತ ಹೆಚ್ಚಿಗೆ ಡ್ಯಾಮೆಜ್ ಆಗಿರುತ್ತದೆ. ಇದನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು ಅರಿತುಕೊಂಡು ಸರಿಯಾಗಿ ಕೆಲಸ ನಿರ್ವಹಿಸಬೇಕು. ಇಲ್ಲವಾದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಲು ಮುಂದಾಗುವುದಾಗಿ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಆರೋಗ್ಯ, ಶಿಕ್ಷಣ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಅನುದಾನದ ಸಮರ್ಪಕ ಬಳಕೆಯ ಬಗ್ಗೆ ವಿವರವಾಗಿ ಚರ್ಚೆ ನಡೆಸಿದರು. ಮುಖ್ಯವಾಗಿ ಶಾಲೆ, ಆಸ್ಪತ್ರೆ ಹಾಗೂ ವಿವಿಧ ವಸತಿ ನಿಲಯ ಹಾಗೂ ಅವುಗಳ ಸುತ್ತಮುತ್ತಲೂ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಸ್ವಚ್ಚತೆಗೆ ಆಯಾ ವ್ಯಾಪ್ತಿಯ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಸಹಕಾರ ನೀಡಲು ಸೂಚಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಯೋಜನಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಯೋಜನಾಧಿಕಾರಿ ಎಸ್.ಎಂ.ಕಾಂಬಳೆ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಆಯಾ ತಾಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು ಉಪಸ್ಥಿತರಿದ್ದರು.

ಬಾಲ್ಯ ವಿವಾಹ ಮುಕ್ತ ಸಂಚಾರಿ ವಾಹನಕ್ಕೆ ಚಾಲನೆ



ಯಾದಗಿರಿ ,ಫೆ.06-

ಯಾದಗಿರಿ ಜಿಲ್ಲೆಯ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿಂದು ''ಬಾಲ್ಯ ವಿವಾಹ ಮುಕ್ತ ಭಾರತಕ್ಕಾಗಿ ಬಾಲ್ಯ ವಿವಾಹ ನಿಷೇಧ'' ಕುರಿತು ಅರಿವು ಮೂಡಿಸಲು ಬಾಲ್ಯ ವಿವಾಹ ಮುಕ್ತ ಸಂಚಾರ ವಾಹನಕ್ಕೆ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಗೌರವಾನ್ವಿತ ಶ್ರೀ ಮರುಳಸಿದ್ಧಾರಾಧ್ಯ ಎಚ್. ಜೆ. ಅವರು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಯಾದಗಿರಿಯ ಪ್ರಥಮ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀ ಗೌರವಾನ್ವಿತ ಶ್ರೀ ಎ ಈರಣ್ಣ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ ಹಾಗೂ ಸಿವಿಲ್ ಮತ್ತು ಜೆಎಂ.ಎಫ್.ಸಿ ನ್ಯಾಯಾಧೀಶರಾದ ಗೌರವಾನ್ವಿತ ಅರುಣ್ ಚೌಗುಲೆ ಮತ್ತು ಹೆಚ್ಚುವರಿ ಸಿವಿಲ್ ಮತ್ತು ಕೆಎಂಎಫ್.ಸಿ ನ್ಯಾಯಾಧೀಶರಾದ ಗೌರವಾನ್ವಿತ ರಾಹುಲ್ ರಾವ್‌ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಮರಿಯಪ್ಪ, ವಕೀಲರ ಸಂಘದ ಅಧ್ಯಕ್ಷರಾದ. ಆರ್ ಎಸ್ ಪಾಟೀಲ್, ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು. ಮಾರ್ಗದರ್ಶಿ ಸಂಸ್ಥೆಯ ನಿರ್ದೇಶಕರಾದ ಆನಂದ್ ರಾವ್, ಹಾಗೂ ಮಕ್ಕಳ ರಕ್ಷಣಾ ಇಲಾಖೆ.ಜಿಲ್ಲಾ ಬಾಲ ಕಾರ್ಮಿಕ ಇಲಾಖೆ, ವಕೀಲರ ಸಂಘದ ಪದಾಧಿಕಾರಿಗಳು ನ್ಯಾಯಾಂಗ ಇಲಾಖೆ ಸಿಬ್ಬಂದಿಗಳು, ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

ಒಂದನೇಯ ಪುಟದಿಂದ

ಶ್ವಾನಗಳ ವೀಕ್ಷಣೆ ಮಾಡಿದ ಸಚಿವರು, ಸಂಸದರು ಹಾಗೂ ಶಾಸಕರು
ಪ್ರಾಣಿಗಳ ಮೇಲೆ ದಯೆ ಇರಲಿ: ಸಚಿವರಾದ ಭೋಸರಾಜು ಸಲಹೆ

ಸುಮಾರು 150ಕ್ಕೂ ಹೆಚ್ಚು ಶ್ವಾನಗಳ ನೋಂದಣಿ ಮಾಡಲಾಗಿತ್ತು. ಪುಡಲ್, ಚೌಚೌ, ಜರ್ಮನ್ ಶೇಫರ್ಡ್, ಗೋಲ್ಡನ್ ರೆಟ್ರಿವರ್, ಸೈಬೇರಿಯನ್ ಹಸ್ಕಿ, ಪಗ್, ಪಾಮೊರಾರಿಯನ್ , ದಾಬರ್ ಮ್ಯಾನ್, ಲ್ಯಾಬ್ರಾದರ್ ರೆಟ್ರಿವರ್, ಫ್ರೆಂಚ್ ಮಾಸ್ತಿಫ್, ಕ್ಯಾನ್ ಕಾರ್ಸೋ, ಡ್ಯಾಶ್ ಹೌಂಡ್, ಬಾಕ್ಸರ್ ಗ್ರೇಟ್ ಡೇನ್, ಪಿಟ್ ಬುಲ್ ಸೇರಿದಂತೆ ವಿವಿಧ ತಳಿಯ ಶ್ವಾನಗಳ ಪ್ರದರ್ಶನದಲ್ಲಿ ನಡೆಯಿತು.

ನಂತರ ಪ್ರದರ್ಶನದಲ್ಲಿ ಭಾಗವಹಿಸಿದ ಎಲ್ಲಾ ಶ್ವಾನಗಳಿಗೆ ಉಚಿತವಾಗಿ ರೇಬೀಸ್ ಲಸಿಕೆಯನ್ನು ಹಾಕಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ವಿಧಾನ ಪರಿಷತ್ ಶಾಸಕರಾದ ಬಸನಗೌಡ ಬಾದರ್ಲಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮಾ, ಪಶು ಸಂಗೋಪನೆ ಇಲಾಖೆಯ ಉಪ ನಿರ್ದೇಶಕರಾದ ಡಾ.ಪೋಮ್ ಸಿಂಗ್, ಮುಖ್ಯ ಪಶುವೈದ್ಯಾಧಿಕಾರಿ ಡಾ.ಬಿ.ವೈ.ವಾಲ್ಮೀಕಿ, ಡಾ.ಶ್ರೀನಿವಾಸ, ಡಾ.ಶಶಿಧರ್, ಡಾ.ಅಮರೇಗೌಡ, ಡಾ. ಬಸವರಾಜ, ಡಾ.ಆನಂದ, ಡಾ.ಪ್ರಕಾಶ, ಡಾ.ಮಂಜುನಾಥ, ಡಾ.ಶ್ರೀಧರ್, ಡಾ. ಪ್ರಹ್ಲಾದ್, ಮುಖಂಡರಾದ ರವಿ ಭೋಸರಾಜು, ಕೆ.ಶಾಂತಪ್ಪ, ಜಯಂತರಾವ್ ಪತಂಗಿ ಸೇರಿದಂತೆ ಇತರರು ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ವೈಭವದಿಂದ ಜರುಗಿದ ಆತ್ಮಲಿಂಗೇಶ್ವರ ಜಾತ್ರೆ: ಹವಾ ಮಲ್ಲಿನಾಥ ಶ್ರೀಗಳ ಸಾನಿಧ್ಯ/ಸಾವಿರಾರು ಭಕ್ತರು ಭಾಗಿ



ಯಾದಗಿರಿ,ಫೆ.06-

ನಗರದ ಗಂಜ್ ಪ್ರದೇಶದಲ್ಲಿ ರುವ ಶ್ರೀ ಆತ್ಮಲಿಂಗೇಶ್ವರ ದೇವ ಸ್ಥಾನದ ಜಾತ್ರಾ ಮಹೋತ್ಸವವು ಸಡಗರ ಸಂಭ್ರಮದಿಂದ ನೆರವೇರಿತು.

ನೀರಗುಡಿಯ ಪೂಜ್ಯರಾದ ಶ್ರೀ ಹವಾ ಮಲ್ಲಿನಾಥ ಮಹಾ ರಾಜರ ದಿವ್ಯ ಸಾನಿಧ್ಯದಲ್ಲಿ ನಡೆದ ಜಾತ್ರಾ,ಮಹೋತ್ಸವದಲ್ಲಿ ಸಾವಿರಾರು ಜನ ಭಕ್ತರು ಭಾಗಿಯಾಗಿ ಭಕ್ತಿ ಸಮರ್ಪಿಸಿದರು.

ಸಂಜೆ ನಡೆದ ಅದ್ದೂರಿ ರಥೊ ತ್ಸವವು ಕಣ್ಮನ ಸೆಳೆಯಿತು. ಪುಷ್ಪಾಲಂಕೃತ ರಥದಲ್ಲಿ ಪೂಜ್ಯರು ಆಸೀನರಾಗುತ್ತಿದ್ದಂತೆ ನೆರೆದ ಭಕ್ತರು, ಆತ್ಮಲಿಂಗ ಮಹಾರಾಜ್ ಕೀ ಜೈ, ಹವಾ ಮಲ್ಲಿನಾಥ ಮಹಾರಾಜ್ ಕೀ ಜೈ ಎಂದು ಜಯಘೋಷ ಮಾಡುತ್ತಾ ರಥವನ್ನು ಎಳೆದು ಪುನೀತರಾ ದರು. ಭಕ್ತರು ರಥಕ್ಕೆ ಉತ್ತುತ್ತಿ,ಬಾಳೆಹಣ್ಣು ಎಸೆದು ನಮಸ್ಕರಿಸಿದರು.

ರಥೋತ್ಸವದ ನಂತರ ನಡೆದ ಧಾರ್ಮಿಕ ಸಭೆಯ ಸಾನಿಧ್ಯವನ್ನು ಹವಾ ಮಲ್ಲಿನಾಥ ಮಹಾಸ್ವಾಮಿಗಳು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಯುವ ಮುಖಂಡ ಮಹೇಶರೆಡ್ಡಿ ಮುದ್ನಾಳ ಮಾತನಾಡಿ, ಪೂಜ್ಯರು ನಮ್ಮ ರಾಜ್ಯ ಮಾತ್ರವಲ್ಲದೇ ದೇಶದ ಹಲವು ಕಡೆ ಮಠ ಮತ್ತು ದೇವಸ್ಥಾನಗಳನ್ನು ಸ್ಥಾಪಿಸಿ, ಜನರಲ್ಲಿ ಧಾರ್ಮಿಕ ಸಂಸ್ಕಾರ ಬಿತ್ತುವ ಕಾರ್ಯ ಮಾಡುತ್ತಿದ್ದಾರೆ. ಜಾತ್ರೆ,ಉತ್ಸವಗಳಿಂದ ಜನರಲ್ಲಿ ಸಹಬಾಳ್ವೆ ಮೂಡುತ್ತದೆ ಎಂದರು.

ಪೂಜ್ಯರ ನೇತೃತ್ವದಲ್ಲಿ ಹಾಗೂ ಅವರ ಆಶೀರ್ವಾದದಿಂದ ಆತ್ಮಲಿಂಗ ದೇವಸ್ಥಾನ ದಿನದಿಂದ ದಿನಕ್ಕೆ ಪ್ರವರ್ಧಮಾನಕ್ಕೆ ಬರುತ್ತಿದ್ದು ಸಂತಸದ ವಿಷಯ.ನಾನೂ ಕೂಡ ಪೂಜ್ಯರ ಒಬ್ಬ ಭಕ್ತನಾಗಿ ಸೇವೆ ಮಾಡಲು ಸಿದ್ದ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಯಾಗಿ ಆಗಮಿಸಿದ್ದ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಶ್ರೀಧರ ಸಾಹು ರಾಯಚೂರ ಅವರು ಮಾತನಾಡಿ, ಪೂಜ್ಯರ ಆಶೀರ್ವಾದ ಬಲದಿಂದ ಲಕ್ಷಾಂತರ ಭಕ್ತರು ಒಳಿತನ್ನು ಕಂಡಿದ್ದು,ಅವರ ಶಾಖಾ ಮಠ ಯಾದಗಿರಿ ನಗರದಲ್ಲಿ ಇರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯ ಎಂದರು. ಪೂಜ್ಯರು ದೇಶಾ ದ್ಯಂತ ಯುವ ಸಮುದಾಯದಲ್ಲಿ ದೇಶಪ್ರೇಮ ಮೂಡಿಸುವ ಕಾರ್ಯ ಮಾಡುತ್ತಿದ್ದು,ಅವರ ಈ ವಿಧಾಯಕ ಕಾರ್ಯಕ್ಕೆ ಎಲ್ಲರೂ ಜೊತೆಗೆ ನಿಲ್ಲ ಬೇಕು ಎಂದರು. ವೇದಿಕೆಯ ಮೇಲೆ ರೈತಸಂಘದ ರಾಜ್ಯ ಉಪಾಧ್ಯಕ್ಷ ಶ್ರೀಕಾಂತ ಪಾಟೀಲ ಮದ್ರಿಕಿ,ಲಕ್ಷ್ಮೀ ಪುತ್ರ ಮಾಲಿ ಪಾಟೀಲ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಜಾತ್ರಾ ಮಹೋತ್ಸವದಲ್ಲಿ, ಉದ್ಯಮಿಗಳಾದ ಶಂಕ್ರಪ್ಪ ಕಾಜಗಾರ, ಬಸವಂತರೆಡ್ಡಿ ಕಾರೆಡ್ಡಿ ಮಲ್ಹಾರ, ನಾಗರಾಜ ಬೀರನೂರ,ಶಿವರಾಜ ಗುತ್ತೇದಾರ ಸೇರಿದಂತೆ ಸಹಸ್ರಾರು ಜನ ಭಾಗವಹಿಸಿದ್ದರು.

ಸಿರುಗುಪ್ಪ : ತುಂಗಭದ್ರಾ ನದಿ ಹರಿಗೋಲು ನೀರು ತುಂಬಿ ಮುಳುಗಿದ ಆತಂಕ ಪ್ರಾಣ ಪಾಯವಾಗಿಲ್ಲ



ಸಿರುಗುಪ್ಪ ,ಫೆ.06-

ತಾಲೂಕಿನ ಹೆರ ಕಲ್ಲು ಗ್ರಾಮ ಬಳಿಯ ಸಿಂಧನೂರು ತಾಲೂಕಿನ ಮುಕ್ಕುಂದಾ ಗ್ರಾಮದ ತುಂಗಭದ್ರಾ ನದಿಯ ನಡು ಗಡ್ಡೆಯಲ್ಲಿರುವ ಗಡ್ಡೆ ಖಾದರ್ ಬಾಷಾ ಖಾದ್ರಿ ಉರುಸ್ ಗುರುವಾರ ಸಂಪನ್ನಗೊಂಡಿತು ಆದರೆ ನದಿ ಮೂಲಕ ಬಂದ ತೆಪ್ಪದಲ್ಲಿ ನೀರು ತುಂಬಿ ಮುಳುಗಿದ್ದು ಯಾವುದೇ ಪ್ರಾಣ ಪಾಯವಾಗಿಲ್ಲ ರಾಯಚೂರು ಕೊಪ್ಪಳ ವಿಜಯನಗರ ಬಳ್ಳಾರಿ ಆಂಧ್ರ ಪ್ರದೇಶದ ಕರ್ನೂಲು ಅನಂತಪುರು ಜಿಲ್ಲೆಗಳಲ್ಲದೇ ಸಾವಿರಾರು ಭಕ್ತರು ಉರುಸಿಗೆ ಆಗಮಿಸಿದ್ದರು ಸಿರುಗುಪ್ಪ ಕಂಪ್ಲಿ ತೆಕ್ಕಲಕೋಟೆ ಹೊಸಪೇಟೆ ಆದೋನಿ ಬಳ್ಳಾರಿ ಮಾರ್ಗವಾಗಿ ಉರುಸಿಗೆ ತೆರಳುವ ಭಕ್ತರಿಗೆ ಹೆರಕಲ್ಲು ಗ್ರಾಮದ ಬಳಿ ಇರುವ ಹರಿ ಗೋಲು ಘಾಟ್ ಮಾತ್ರ ಏಕೈಕ ಮಾರ್ಗವಾಗಿದ್ದು ತುಂಗಭದ್ರ ನದಿ ದಾಟಲು ತೆಪ್ಪಗಳನ್ನೇ ಅವಲಂಬಿಸಬೇಕಾದ ಪರಿಸ್ಥಿತಿ ಇದೆ ಸಾವಿರಾರು ಭಕ್ತರು ಆಗಮಿಸಿದ್ದರಿಂದ ಕೇವಲ 6 ತೆಪ್ಪ ಲಭ್ಯವಿದ್ದು ತೆಪ್ಪದಿಂದ ಇಳಿಯಲು ಭಾರಿ ನೂಕುನುಗ್ಗಲು ಉಂಟಾಯಿತು ಈ ವೇಳೆ ಒಂದೇ ತೆಪ್ಪದಲ್ಲಿ 20 ಕ್ಕಿಂತಲೂ ಹೆಚ್ಚು ಜನ ಕುಳಿತ ಪರಿಣಾಮ ತೆಪ್ಪದಲ್ಲಿ ನೀರು ತುಂಬಿ ಮುಳುಗಿದ ಘಟನೆ ನಡೆದಿದೆ ಅದೃಷ್ಟವಶಾತ್ ದಡದ ಸಮೀಪದಲ್ಲೇ ಈ ಘಟನೆ ನಡೆದ ಕಾರಣ ಯಾವುದೇ ಅವಘಡ ಸಂಭವಿಸಿಲ್ಲ ಇದೇ ರೀತಿಯಾಗಿ ನಾಲ್ಕು ತೆಪ್ಪಗಳು ಮಗುಚಿ ಕೊಂಡಿವಿ ಶುಕ್ರವಾರವೂ ಜಿಯಾರತ್ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸುವ ಸಾಧ್ಯತೆ ಇದ್ದು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

ಅರ್ಹರಿಗೆ ಗ್ಯಾರಂಟಿ ಯೋಜನೆ ತಲುಪಿಸಿ-ಅಮೃತರಾವ ಚಿಮಕೋಡೆ



ಬೀದರ, ಫೆ.06-

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹರಿಗೆ ತಲುಪಿಸುವಲ್ಲಿ ಯಾವುದೇ ವಿಳಂಭವಾಗಬಾರದು. ಪ್ರತಿ ಹಂತದಲ್ಲೂ ಅಧಿಕಾರಿಗಳು ಗಮನಿಸಿ ಅರ್ಹ ಫಲಾನುಭವಿಗಳಿಗೆ ಸಮರ್ಥಕವಾಗಿ ಹಾಗೂ ನಿಗಧಿತ ಸಮಯದಲ್ಲಿ ತಲುಪಿಸಬೇಕೆಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಸೂಚಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಬೀದರ ಅವರ ಅಧ್ಯಕ್ಷತೆಯಲ್ಲಿ ಜಿಲ್ಲೆಯ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಗೃಹಲಕ್ಷ್ಮೀ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಜಿಲ್ಲೆಯಲ್ಲಿ 3,44,896 ಗೃಹಲಕ್ಷ್ಮೀ ಫಲಾನುಭವಿಗಳಿದ್ದು, ಮೃತ ಫಲಾನುಭವಿಗಳ ಕುರಿತು ಪ್ರತಿ ತಿಂಗಳು ನಿರಂತರ ಪರಿಷ್ಕರಣೆ ಮಾಡಬೇಕು. ಅರ್ಹರಿಗೆ ಗೃಹಲಕ್ಷ್ಮೀ ಯೋಜನೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಶ್ರಮಿಸಬೇಕೆಂದರು.

ಗೃಹಲಕ್ಷ್ಮೀ ಯೋಜನೆಯು ಮಹಿಳಾ ಸಬಲೀಕರಣ ಹಾಗೂ ಸ್ವಾಭಿಮಾನದ ಗುರುತಾಗಿದ್ದು, ಕುಟುಂಬದ ಯಜಮಾನಿಯು ಆರ್ಥಿಕವಾಗಿ ಸಬಲೀಕರಣಗೊಂಡಲ್ಲಿ ಕುಟುಂಬದ ಸಮಗ್ರ ಅಭಿವೃದ್ಧಿಗೆ ಬುನಾದಿಯಾಗಿದೆ. ಕರ್ನಾಟಕ ರಾಜ್ಯ ಸರ್ಕಾರವು ಬಿ.ಪಿ.ಎಲ್. ಮತ್ತು ಎ.ಪಿ.ಎಲ್., ಅಂತ್ಯೋದಯ ಕಾರ್ಡನಲ್ಲಿ ನಮೂದಿಸಿರುವಂತೆ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು ರೂ. 2000 ಗಳ ಸಹಾಯಧನ ನೀಡಲಾಗುತ್ತಿದೆ ಎಂದರು.

ಗೃಹಲಕ್ಷ್ಮೀ ಯೋಜನೆ ಒಟ್ಟು 3,44,896 ಫಲಾನುಭವಿಗಳಿದ್ದು, 1547.49 ಕೋಟಿ ರೂ. ಸೆಪ್ಟೆಂಬರ್.2025 ರವರೆಗೆ ಸಹಾಯಧನ ಡಿ.ಬಿ.ಟಿ. ಮೂಲಕ ಅವರ ಖಾತೆಗಳಿಗೆ ಜಮಾ ಮಾಡಲಾಗಿದೆ. ಗೃಹಜ್ಯೋತಿ ಯೋಜನೆಯಡಿ 3,56,422 ಅರ್ಹ ಫಲಾನುಭವಿಗಳಿದ್ದು, ಡಿಸೆಂಬರ್. 2025 ರವರೆಗೆ 462.46 ಕೋಟಿ ರೂ. ಸಬ್ಸಿಡಿ ನೀಡಲಾಗಿದೆ. ಶಕ್ತಿ ಯೋಜನೆಯಡಿ 28-01-2026 ರವರೆಗೆ 11.11 ಕೋಟಿ ಮಹಿಳೆಯರು ಪ್ರಯಾಣಿಸಿದ್ದು, 327.66 ಕೋಟಿ ರೂ. ಸಂದಾಯವಾಗಿರುತ್ತದೆ. ಪ್ರತಿನಿತ್ಯ ಸರಾಸರಿ 1 ಲಕ್ಷ 16 ಸಾವಿರ ಮಹಿಳೆಯರು ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದಾರೆಂದರು.

ಅನ್ನಭಾಗ್ಯ ಯೋಜನೆಯಡಿಯಲ್ಲಿ 1313305 ಫಲಾನುಭವಿಗಳಿದ್ದು, 5 ಕೆಜಿ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದಿಂದ ಹೆಚ್ಚುವರಿ ನೀಡಲಾಗುವ 5 ಕೆಜಿ ಅಕ್ಕಿ ಮೊತ್ತವನ್ನು ಡಿಸೆಂಬರ್.2024 ರವರೆಗೆ ಡಿ.ಬಿ.ಟಿ. ಮುಖಾಂತರ ನೇರವಾಗಿ ಫಲಾನುಭವಿಗಳ ಖಾತೆಗೆ 333.28 ಕೋಟಿ ಹಣ ಜಮೆ ಮಾಡಲಾಗಿದೆ. ಜನವರಿ.2025 ರ ಮಾಹೆಯ ಡಿಬಿಟಿ ಮೂಲಕ ವರ್ಗಾವಣೆ ಬಾಕಿ ಇರುತ್ತದೆ. ಫೆಬ್ರುವರಿ.2025 ರ ಮಾಹೆಯಿಂದ ಡಿ.ಬಿ.ಟಿ. ಬದಲಾಗಿ ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗಳಿಗೆ 05 ಕೆ.ಜಿ. ಹೆಚ್ಚುವರಿ ಅಕ್ಕಿ ಸೇರಿಸಿ ಒಟ್ಟು 10 ಕೆ.ಜಿ. ಅಕ್ಕಿ ಜೂನ್.2025 ರವರೆಗೆ ವಿತರಿಸಲಾಗಿದೆ. ನಂತರ ಜುಲೈ.2025ರ ಮಾಹೆಯಿಂದ ಆಹಾರಧಾನ್ಯದಲ್ಲಿ ಅಕ್ಕಿ ಜೊತೆ ಜೋಳ ಸೇರಿಸಿ ಒಟ್ಟು 10 ಕೆ.ಜಿ. ಆಹಾರಧಾನ್ಯವನ್ನು ಸೆಪ್ಟೆಂಬರ್.2025ರ ಮಾಹೆಯವರೆಗೆ ನೀಡಲಾಗಿರುತ್ತದೆ. ಅಕ್ಟೋಬರ್.2025ರ ಮಾಹೆಯಿಂದ ಒಟ್ಟು 10 ಕೆ.ಜಿ. ಅಕ್ಕಿಯನ್ನು ಮಾತ್ರ ವಿತರಣೆ ಮಾಡಲಾಗುತ್ತಿದೆಂದರು.

ಯುವನಿಧಿ ಯೋಜನೆಯಡಿಯಲ್ಲಿ ಪದವಿ ಪಡೆದ 15211 ಮತ್ತು ಡಿಪ್ಲೋಮಾ ಪಡೆದ 375 ಒಟ್ಟು 15586 ವಿದ್ಯಾರ್ಥಿಗಳಿಗೆ ಆಗಸ್ಟ್.2025 ರವರೆಗೆ 30.10 ಕೋಟಿ ಹಣ ಡಿಬಿಟಿ ಮೂಲಕ ಪವತಿಸಲಾಗಿದೆ. ಯುವನಿಧಿ ಯೋಜನೆಯಲ್ಲಿ ಜಿಲ್ಲೆಯ ಪದವಿಧರರು ನೋಂದಾಯಿತರಾದವರಿಗೆ ಅವರಿಗೆ ಉದ್ಯೋಗ ಹೊಂದಲು ಸರಿಯಾದ ಕೌಶಲ್ಯ ತರಬೇತಿ, ಮಾರ್ಗದರ್ಶನ ನೀಡಬೇಕು. ಈಗ ಪದವಿ ಹಾಗೂ ಇತರೆ ಪರೀಕ್ಷೆಗಳು ಜರುಗಿದ್ದು ಹೊಸ ಫಲಾನುಭವಿಗಳು ಯುವನಿಧಿ ಯೋಜನೆ ಒಳಪಡಲು ಆಸಕ್ತರಾಗಿದ್ದಾರೆ. ಅಧಿಕಾರಿಗಳು ಜಿಲ್ಲಾ ತಾಲ್ಲೂಕು ಮಟ್ಟದಲ್ಲಿ ಯುವನಿಧಿ ಯೋಜನೆಯು ಕಾಲೇಜುಗಳಲ್ಲಿ ಕ್ಯಾಂಪ್ ಆಯೋಜಿಸಿ ಮಾಹಿತಿ ನೀಡಬೇಕೆಂದರು.

ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ಅಧಿಕಾರಿಗಳಾದ ಕಿಶೋರ ದುಭೆ ಅವರು ಮಾತನಾಡಿ, ಗ್ಯಾರಂಟಿ ಯೋಜನೆ ಗಳು ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ಲಿಖಿತ ರೂಪದಲ್ಲಿ ದೂರು ಸಲ್ಲಿಸಿದ್ದಲ್ಲಿ ಅವರ ಸಮಸ್ಯೆಗೆ ಸ್ಪಂದಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಉಪಾಧ್ಯಕ್ಷರು, ತಾಲ್ಲೂಕಾ ಮಟ್ಟದ ಅಧ್ಯಕ್ಷರು, ಸದಸ್ಯರುಗಳು ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಸಮರ್ಪಕವಾಗಿ ಪಡಿತರ ಅಂಗಡಿಯವರು ನೀಡುತ್ತಿಲ್ಲ ಮತ್ತು ಶಾಲಾ ವಿದ್ಯಾರ್ಥಿಗಳಿಗೆ ಸರಿಯಾಗಿ ಬಸ್ಸು ಓಡಿಸುವ ಬಗ್ಗೆ ಸಭೆಯಲ್ಲಿ ಅಧ್ಯಕ್ಷರ ಗಮನಕ್ಕೆ ತಂದರು.

ಈ ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನಾ ಅನುಷ್ಠಾನ ಸಮಿತಿ ಉಪಾಧ್ಯಕ್ಷರುಗಳಾದ ಲತಾ ಹಾರಕೂಡ, ಮಾರುತಿ ಬಂಗಾರೆ, ಮಹಬೂಬ ಖಾನ್, ಪೂಜಾ ಜಾರ್ಜ, ಉದಯಕುಮಾರ ವಾರದ, ತಾಲ್ಲೂಕು ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಳು ಸೇರಿದಂತೆ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಟೆಂಗಿನಮಠ-ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಮಹೋತ್ಸವ
ತತ್ವ ಶ್ರೀಮಂತಿಕೆ ವೀರಶೈವ ಸಮಾಜದ ಶಕ್ತಿ : ಅನ್ನದಾನೀಶ್ವರ ಮಹಾಸ್ವಾಮಿಗಳು



ಬಾಗಲಕೋಟೆ,ಫೆ.05-

ವೀರಶೈವ-ಲಿಂಗಾಯತ ಎರಡು ಒಂದೆಯಾಗಿದ್ದು ತತ್ವ ಶ್ರೀಮಂತಿಕೆ ವೀರಶೈವ ಸಮಾಜದ ಶಕ್ತಿಯಾಗಿದೆ,ಲಿಂಗದ ಪ್ರಾಣವೇ ಜಂಗಮರು ಎಂದು ಸಾರುವ ಮೂಲಕ ಎಲ್ಲರನ್ನು ಏಕತೆಯಿಂದ ನೋಡುವ ಏಕೈಕ ಧರ್ಮವಾಗಿದೆ ಎಂದು ಮುಂಡರಗಿಯ ಅನ್ನದಾನೀಶ್ವರ ಸಂಸ್ಥಾನಮಠದ ಮನ್ನಿರಂಜನ ಜಗದ್ಗುರು ನಾಡೋಜ ಡಾ.ಅನ್ನದಾನೀಶ್ವರ ಮಹಾಸ್ವಾಮಿಗಳು ಹೇಳಿದರು.

ಅವರು ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ನಿರಂಜನ ಚರಪಟ್ಟಾಧಿಕಾರ ಸಮಾರಂಭ ನಿಮಿತ್ಯ ಚರಂತಿಮಠದ ಶಿವಾನುಭವ ಮಂಟಪದಲ್ಲಿ ಗುರುವಾರ ನಡೆದ ಕಾರಣಿಕ ಯುಗಪುರುಷ ಲಿಂ.ಹಾನಗಲ್ಲ ಶ್ರೀ ಕುಮಾರ ಮಹಾಸ್ವಾಮಿಗಳವರ 159 ನೆಯ ಜಯಂತ್ಯುತ್ಸವ ಹಾಗೂ ಪುರಾಣ ಪ್ರವಚಣದ ಮಂಗಲ ಸಮಾರಂಭದ ದಿವ್ಯ ಸಾನಿದ್ಯವನ್ನು ವಹಿಸಿ ಹಾನಗಲ್ ಶ್ರೀಕುಮಾರ ಶಿವಯೋಗಿಗಳ ಭಾವ ಚಿತ್ರಕ್ಕೆ ಪುಷ್ಪಾಂಜಲಿ ಮೂಲಕ ಗೌರವ ನಮನಗಳನ್ನು ಸಲ್ಲಿಸಿ ಮಾತನಾಡಿದರು ಅವರು ವೀರಶೈವರು ತತ್ವಬದ್ದರಾಗಬೇಕು, ಶಿಕ್ಷಣ ಪಡೆದುಕೊಳ್ಳಬೇಕು, ಉದ್ಯೋಗಶೀಲರಾಗಬೇಕು ಎಂಬ ಉದ್ದೇಶದಿಂದ ಶ್ರೀಮದ್‌ವೀರಶೈ ಲಿಂಗಾಯತ ಮಹಾಸಭೆ ಹುಟ್ಟಿಕೊಂಡು ಸಮಾಜದ ಪ್ರಗತಿಯ ಕೆಲಸ ಮಾಡುತ್ತ ಬಂದಿದೆ. ವೀರಶೈವ ಧರ್ಮ ಪ್ರಾಚೀನ ಮತ್ತು ಪುರಾತಣವಾಗಿದ್ದು ಅದನ್ನು ಹೊತ್ತು ಬಸವಣ್ಣನವರು ಹೊತ್ತು ನಡೆಸುವ ಕೆಲಸವನ್ನು ಮಾಡಿದ್ದಾರೆ. ಲಿಂಗ ಪೂಜೆಯ ಮೂಲಕ ಲಿಂಗದ ಪ್ರಾಣವೇ ಜಂಗಮ ಎಂದು ಸಾರುವುದರ ಮೂಲಕ ಎಲ್ಲರನ್ನು ಒಗ್ಗೂಡಿಸಿ ಸಮಾಜದ ಬೆಳವಣಿಗೆ ಮಾಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ವೀರಶೈವ ಮತ್ತು ಲಿಂಗಾಯತರ ನಡುವೆ ಗೊಂದಲಗಳನ್ನು ಎಬ್ಬಿಸುತ್ತಿದ್ದು ಅವೆರಡು ಒಂದೇ ತತ್ವದಡಿ ನಡೆದುಬಂದಿದ್ದು, ವೀರಶೈವ ಮತ್ತು ಲಿಂಗಾಯತ ಎರಡು ಒಂದೇ ಎಂದರು.

ಬಾದಾಮಿ ವಿಶ್ರಾಂತ ಪ್ರಾಚಾರ್ಯ ಜಿ.ಬಿ.ಶೀಲವಂತ ಅವರು ಸಮಾಜ ಪ್ರೇಮಿ ಹಾನಗಲ್ ಕುಮಾರ ಮಹಾಸ್ವಾಮಿಗಳು ಹಚ್ಚಿದ ಎರಡು ನಂದಾದೀಪಗಳು ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭೆ ಹಾಗೂ ಶ್ರೀ ಶಿವಯೋಗಮಂದಿರ ಸಂಸ್ಥೆ ಕುರಿತು ವಿಶೇಷ ಉಪನ್ಯಾಸ ನೀಡಿ ಅಖೀಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ಮತ್ತು ಶಿವಯೋಗ ಮಂದಿರಗಳು ಹಾನಗಲ್ಲ ಕುಮಾರ ಸ್ವಾಮಿಗಳು ಹಚ್ಚಿದ ಎರಡು ನಂದಾದೀಪಗಳಾಗಿವೆ. ವೀರಶೈವ ಸಮಾಜದ ಸಂಘಟನೆ, ಏಕತೆ ಸಾಮರಸ್ಯಕ್ಕೆ ಕಾರಣೀಭೂತರಾಗಿ ಮಾನವೀಯತೆ ಮತ್ತು ಮಾನವತಾವದಕ್ಕೆ ಹಾನಗಲ್ಲ ಶಿವಯೋಗಿಗಳು ಮಾದರಿಯಾಗಿದ್ದರು.

ವಿಧಾನ ಪರಿಷತ್ ಸದಸ್ಯ ಹನಮಂತ ನಿರಾಣಿ, ಸಮಾಜಿಕ ಕಾರ್ಯಕರ್ತರು ಬಸವಪ್ರಭು ಸರನಾಡಗೌಡ ಮಾತನಾಡಿ ಟೀಕಿನಮಠ ಪರಂಪರೆ ಹಾಗೂ ಸಮಾಜದ ಪ್ರಗತಿಗಾಗಿ ದುಡಿದ ಮಠ ಮಾನ್ಯಗಳ ಬಗ್ಗೆ ವಿವರಿಸಿದರು. ಅಗಡಿ ಅಕ್ಕಿಮಠದ ಶ್ರೀ ಗುರುಲಿಂಗ ಸ್ವಾಮಿಗಳು ಪ್ರವಚನ ಮಂಗಲ ನುಡಿಯನ್ನಾಡಿದರು,

ಚರಂತಿಮಠದ ಪ್ರಭುಮಹಾಸ್ವಾಮಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಅನವಾಲ ಶೃದ್ಧಾನಂದ ಆಶ್ರಮದ ಡಾ.ಕೈಲಾಸಪತಿ ಸ್ವಾಮಿಗಳು, ಗುಳೆದಗುಡ್ಡದ ಒಪ್ಪತ್ತೇಶ್ವರ ಸ್ವಾಮಿಗಳು, ಟೀಕಿನಮಠದ ಮಲ್ಲಿಕಾರ್ಜುನ ದೇಶಿಕರ ಸ್ವಾಮಿಗಳು, ಕಿತ್ತೂರು ಸಂಸ್ಥಾನ ರಾಜಗುರು ಮಡಿವಾಳ ರಾಜಯೋಗಿಂದ್ರಸ್ವಾಮಿಗಳು, ಕೆಂಪಯ್ಯಸ್ವಾಮಿಮಠದ ಡಾ,ಮಲ್ಲಿಕಾರ್ಜುನ ಸ್ವಾಮಿಗಳು, ಹುಕ್ಕೇರಿಯ ಶಿವಬಸವಸ್ವಾಮಿಗಳು, ಹಾರನಹಳ್ಳಿ ಚೇತನ ದೇವರು ಸಾನಿದ್ಯವಹಿಸಿದ್ದರು.

ಕಾರ್ಯಕ್ರಮದಲ್ಲಿ ಚರಪಟ್ಟಾಧಿಕಾರ ಸಮಿತಿಯ ಕಾರ್ಯಾದ್ಯಕ್ಷರಾದ ಡಾ.ವೀರಣ್ಣ ಚರಂತಿಮಠ, ಜಿ,ಎನ.ಪಾಟೀಲ,ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಅಶೋಕ ಸಜ್ಜನ ಬೇವೂರ, ಮಹಾಂತೇಶ ಶೆಟ್ಟರ, ಮಲ್ಲಿಕಾರ್ಜುನ ಸಾಸನೂರ, ಚಂದ್ರಶೇಖರ ಶೆಟ್ಟರ, ಎ.ಎಸ್.ಪಾವಟೆ, ಬಸವರಾಜ ಭಗವತಿ, ಬಸವರಾಜ ಮುಕುಪಿ. ಕುಮಾರಸ್ವಾಮಿ ಹಿರೇಮಠ ಚಿತ್ತರಗಿ ಸೇರಿದಂತೆ ಅನೇಕರು ಸಾರ್ವಜನಿಕರು ಬಾಗವಹಿಸಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ



ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಕಲ್ಯಾಣ: ಪಿಡಿಓ ನಶ್ರದ್ ಬಾನು

ಬಳ್ಳಾರಿ,ಫೆ.06-

ರಾಜ್ಯ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಕಲ್ಯಾಣವಾಗುತ್ತಿದೆ ಎಂದು ಶಿಡಗಿನವೊಳ ಗ್ರಾಮಪಂಚಾಯತ್ ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ನಶ್ರದ್ ಬಾನು ಅವರು ಹೇಳಿದರು.

ಬಳ್ಳಾರಿ ತಾಲ್ಲೂಕಿನ ಮೀನಳ್ಳಿ ಗ್ರಾಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕ್ಷೇತ್ರ ಪ್ರಚಾರ ಕಾರ್ಯಕ್ರಮದಡಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಸೇರಿದಂತೆ ವಿವಿಧ ಯೋಜನೆಗಳ ಕುರಿತು ಜಾನಪದ ಸಂಗೀತ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಮಂಗಳವಾರ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಪಂಚ ಗ್ಯಾರಂಟಿಗಳ ಜೊತೆಗೆ ಹಲವಾರು ಅಭಿವೃದ್ಧಿ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಸಾರ್ವಜನಿಕರು ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು. ಅಕ್ಷಯ ಕಲಾ ಟ್ರಸ್ಟ್ ಹೊಸ ಯರಗುಡಿ ತಂಡವು ರಾಜ್ಯ ಸರ್ಕಾರದ ಯೋಜನೆಗಳನ್ನು ಜಾನಪದ ಸಂಗೀತ ಕಾರ್ಯಕ್ರಮದ ಮೂಲಕ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ಶಿಡಗಿನವೊಳ ಗ್ರಾಪಂ ಅಧ್ಯಕ್ಷರಾದ ಸುಜಾತ ತಾಯಣ್ಣ, ಉಪಾಧ್ಯಕ್ಷ ಮಹಾನಂದಿ ತಿಮ್ಮಯ್ಯ, ಅಂಗನವಾಡಿ ಕಾರ್ಯಕರ್ತೆ ವರಲಕ್ಷ್ಮಿ, ಅಕ್ಷಯ ಕಲಾ ಟ್ರಸ್ಟ್ ನ ಅಧ್ಯಕ್ಷ ಹಾಗೂ ಕಲಾವಿದ ಹೆಚ್.ಜಿ.ಸುಂಕಪ್ಪ, ಕಲಾವಿದರಾದ ಸರ್ವಮಂಗಳಮ್ಮ, ಪಾರ್ವತಿ, ದೇವೇಂದ್ರಪ್ಪ, ತಮಟೆ ವಾದಕರಾಗಿ ಸೋಮಶೇಖರ್, ನಾಗಮೂರ್ತಿ ಸೇರಿದಂತೆ ಗ್ರಾಮದ ಸಾರ್ವಜನಿಕರು ಇದ್ದರು.

ಮಕ್ಕಳ ಹಕ್ಕುಗಳು ಮತ್ತು ಮಕ್ಕಳ ಕಾನೂನುಗಳ ಬಗ್ಗೆ ಜಾಗೃತಿ ಕಾರ್ಯಕ್ರಮ




ಕೊಪ್ಪಳ,ಫೆ.06-

ಮಕ್ಕಳ ಹಕ್ಕುಗಳ ಮತ್ತು ಮಕ್ಕಳ ಕಾನೂನುಗಳ ಬಗ್ಗೆ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಅಭಿನವ ಶ್ರೀ ಸಿದ್ದೇಶ್ವರ ಕ್ಷೇಮಾಭಿವೃದ್ಧಿ ಸಂಸ್ಥೆ ಕೊಪ್ಪಳರವರ ಸಂಯುಕ್ತಾಶ್ರಯದಲ್ಲಿ ಕೊಪ್ಪಳದ ಎಜ್ಯುಕೇರ್ ಇಂಗ್ಲೀಷ್ ಮೀಡಿಯಂ ಪ್ರೌಢಶಾಲೆಯಲ್ಲಿ ಜಾಗೃತಿ ಕಾರ್ಯಕ್ರಮ ಆಯೋಜಿಸಲಾಗಿತ್ತು

ಕಾರ್ಯಕ್ರಮದಲ್ಲಿ ಮಕ್ಕಳ ರಕ್ಷಣೆ, ಮಕ್ಕಳ ಹಕ್ಕುಗಳು ಮತ್ತು ಸುರಕ್ಷತೆಗೆ ಸಂಬಂಧಿಸಿದಂತೆ ಕಾನೂನುಗಳು ಹಾಗೂ ಹದಿಹರೆಯದವರಲ್ಲಿ ಆಗುವ ದೈಹಿಕ, ಮಾನಸಿಕ ಬದಲಾವಣೆಗಳು, ವೈಯಕ್ತಿಕ ಶುಚಿತ್ವಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು. ಮಕ್ಕಳ ಸಹಾಯವಾಣಿ ಸಂಖ್ಯೆಗಳಾದ 1098 ಮತ್ತು ಇಆರ್‌ಎಸ್‌ಎಸ್ 112 ಅಕ್ಕಪಡೆಗಳ ಬಳಕೆಯ ಬಗ್ಗೆ ಹಾಗೂ ಬಾಲ್ಯವಿವಾಹ ತಡೆ, ಪೋಕ್ಸೋ ಕಾಯ್ದೆ, ಮಕ್ಕಳ ಸುರಕ್ಷತಾ ನೀತಿ ಮತ್ತು ಸುರಕ್ಷಿತ ಸ್ಪರ್ಶ - ಅಸುರಕ್ಷಿತ ಸ್ಪರ್ಶ, ಮಕ್ಕಳ ಮೇಲಿನ ದೌರ್ಜನ್ಯಗಳ ವಿರುದ್ಧ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಾಂತಸ್ವಾಮಿ ಪೂಜಾರ, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಕಳಸಾಪೂರ, ಪೊಲೀಸ್ ಇಲಾಖೆಯ ಪ್ರತಿನಿಧಿ ಜಿ. ಸಿ. ಕಲಾಲ, ಸಾಮಾಜಕಾರ್ಯಕರ್ತೆ ಪ್ರತಿಭಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಸಂಯೋಜಕರು, ಮಕ್ಕಳ ಸಹಾಯವಾಣಿ (1098/112) ಕೇಂದ್ರ. ಅಭಿನವ ಶ್ರೀ ಸಿದ್ದೇಶ್ವರ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರಾದ ಆನಂದ್ ಹಳ್ಳಿಗುಡಿ, ಎಜ್ಯುಕೇರ್ ಶಿಕ್ಷಣ ಸಂಸ್ಥೆಯ ಉಪ ಪ್ರಾಂಶುಪಾಲರಾದ ಸುನಿತಾ, ದೈಹಿಕ ಶಿಕ್ಷಕ ಶ್ರೀಕಾಂತ್ ಉಪಸ್ಥಿತರಿದ್ದರು.

ಬಸವರಾಜ ಈಳಿಗನೂರ ಅವರಿಗೆ ಪಿಎಚ್‌ಡಿ



ಬಳ್ಳಾರಿ,ಫೆ.06-

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯ ಶಾಸ್ತ್ರ ಅಧ್ಯಯನ ವಿಭಾಗದಿಂದ ಬಸವರಾಜ ಈಳಿಗನೂರ ಅವರಿಗೆ ಪಿ.ಎಚ್.ಡಿ ಪದವಿ ಲಭಿಸಿದೆ.

ವಿಶ್ವವಿದ್ಯಾಲಯದ ವಾಣಿಜ್ಯ ಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾ.ರವಿ ಬಿ ಇವರ ಮಾರ್ಗದರ್ಶನದಲ್ಲಿ ''ಎ ಸ್ಟಡಿ ಆನ್ ಇನ್‌ಸ್ಟಿಟ್ಯೂಷನಲ್ ಸಪೋರ್ಟ್ ಫಾರ್ ಸ್ಟಾರ್ಟ್ ಅಪ್ ಇನಿಶಿಯೇಟಿವ್ಸ್ ಇನ್ ಕರ್ನಾಟಕ'' ಎಂಬ ವಿಷಯದ ಮೇಲೆ ಮಹಾಪ್ರಬಂಧ ಮಂಡಿಸಿದ ಹಿನ್ನೆಲೆಯಲ್ಲಿ ಪಿ.ಎಚ್.ಡಿ ಪದವಿ ನೀಡಿದೆ ಎಂದು ವಿವಿ ಪ್ರಕಟಣೆ ತಿಳಿಸಿದೆ. ಇವರು ಪ್ರಸ್ತುತ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವಾಣಿಜ್ಯಶಾಸ್ತ್ರ ಅಧ್ಯಯನದ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ಫೆ.13 ರಂದು ಸಾರಿಗೆ ಅದಾಲತ್

ಬಳ್ಳಾರಿ,ಫೆ.06-

ಬಳ್ಳಾರಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ವತಿಯಿಂದ ಸಾರಿಗೆ ಸಂಬಂಧಿಸಿದಂತೆ ಸಾರ್ವಜನಿಕರ ದೂರು, ಕುಂದು-ಕೊರತೆಗಳನ್ನು ಆಲಿಸಿ ಪರಿಹರಿಸಲು ಫೆ.13 ರಂದು ಮಧ್ಯಾಹ್ನ 03 ಗಂಟೆಗೆ ನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಸಾರಿಗೆ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಅದಾಲತ್ ನಲ್ಲಿ ಸಾರ್ವಜನಿಕರ ಕುಂದು-ಕೊರತೆಗಳನ್ನು ಅರ್ಜಿ ಮೂಲಕ ಸ್ವೀಕರಿಸಿ ಇತ್ಯರ್ಥಗೊಳಿಸಲಾಗುವುದು. ಸಾರ್ವಜನಿಕರು ತಮ್ಮ ಬಾಕಿ ಇರುವ ಅರ್ಜಿಗಳನ್ನು ಅದಾಲತ್ ನಲ್ಲಿ ಭಾಗವಹಿಸಿ ಬಗೆಹರಿಸಿಕೊಳ್ಳಬಹುದಾಗಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಮೊಬೈಲ್ ಮೃತ್ಯು ಮೋಡಿಯಿಂದ ಮಕ್ಕಳನ್ನು ರಕ್ಷಿಸುವವರಾರು?



ಕೈಗೆ ಮೊಬೈಲ್ ಬಂದಾಗ, ಪ್ರಪಂಚವೇ ಬೆರಳತುದಿಯಲ್ಲಿ ಎಂದು ಬೀಗಿದ್ದೆವು. ಸುಲಭವಾಗಿಸಿಕೊಳ್ಳುವ ನಿಟ್ಟಿನಲ್ಲಿ ನಮ್ಮ ಬದುಕಿನೊಳಕ್ಕೇ ಬಿಟ್ಟುಕೊಂಡಿದ್ದೆವು. ಆದರೆ ಈಗ ಮೊಬೈಲ್ ಆಡಿಸಿದಂತೆ ಆಡುವ ಕೀಲುಗೊಂಬೆಗಳಾಗಿದ್ದೇವೆ. ಮುಂದುವರೆದರೆ, ಗಾಝಿಯಾಬಾದ್‌ನಲ್ಲಾದ ದುರ್ಘಟನೆ ನಮ್ಮ ಮನೆಯಲ್ಲೂ ಘಟಿಸಬಹುದು.

ಉತ್ತರ ಪ್ರದೇಶದ ಗಾಝಿಯಾಬಾದ್‌ನ ಮೂವರು ಅಪ್ರಾಪ್ತ ಸಹೋದರಿಯರು, ಆನ್‌ಲೈನ್ ಗೇಮಿಂಗ್ ಗೀಳಿಗೆ ಬಿದ್ದು, ಅದರಿಂದ ಹೊರಬರಲಾಗದೆ, 9ನೇ ಮಹಡಿ ಮೇಲಿನಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅಷ್ಟೇ ಅಲ್ಲ, ಸಾರಿ ಪಪ್ಪಾ, ನಾವು ಕೊರಿಯಾ ಬಿಡಲಾಗುವುದಿಲ್ಲ. ಅದು ನಮ್ಮ ಜೀವನ, ನೀವು ಅದರಿಂದ ನಮ್ಮನ್ನು ಬೇರ್ಪಡಿಸಲು ಸಾಧ್ಯವಿಲ್ಲ, ಅದಕ್ಕಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇವೆ ಎಂದು ಡೆತ್ ನೋಟ್ ಬರೆದಿಟ್ಟಿದ್ದಾರೆ.

ಆತ್ಮಹತ್ಯೆಗೆ ಪ್ರಚೋದಿಸುವ ಕೊರಿಯನ್ ಆನ್‌ಲೈನ್ ಗೇಮ್‌ನ ಚಟಕ್ಕೆ ಬಿದ್ದಿದ್ದ ಮೂವರು ಸಹೋದರಿಯರು, ಗೇಮ್‌ನ ಕೊನೆಯ 50ನೇ ಹಂತದ ಆತ್ಮಹತ್ಯೆ ಆಟವನ್ನು ಆಡಿದ್ದರು. ಅದರ ಗುಂಗಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದರು. 10 ವರ್ಷಗಳ ಕೆಳಗೆ ಬ್ಲೂವೇಲ್ ಎಂಬ ಇಂಥದ್ದೇ ಆನ್‌ಲೈನ್ ಗೇಮಿಗೆ ನೂರಾರು ಜನ ಬಲಿಯಾಗಿದ್ದರು.

ಯಾವ ಪೋಷಕರಿಗೇ ಆಗಲಿ, ತಾವು ಎತ್ತಿ ಆಡಿಸಿ, ಉಣಿಸಿ, ಬೆಳೆಸಿದ ಮಕ್ಕಳು ತಮ್ಮ ಕಣ್ಣೆದುರೇ ಉಸಿರು ಚೆಲ್ಲುವುದು ಸಹಿಸಲಸಾಧ್ಯವಾದ ಸಂಕಟ ತರುತ್ತದೆ ಮತ್ತು ಬದುಕಿರುವವರೆಗೂ ಕಾಡುತ್ತದೆ. ವಿಪರ್ಯಾಸಕರ ಸಂಗತಿ ಎಂದರೆ, ಆ ಅಪ್ರಾಪ್ತ ಸಹೋದರಿಯರ ಕೈಗೆ ಮೊಬೈಲ್ ಕೊಟ್ಟವರು ಅವರ ಪೋಷಕರೇ ಆಗಿದ್ದಾರೆ. ಆ ಜಾಗದಲ್ಲಿ, ಆ ಅಪರಾಧಿ ಸ್ಥಾನದಲ್ಲಿ ನಾವೂ ಇದ್ದೇವೆ.

ಇಂದು ಸಣ್ಣ ಮಗುವಿಗೆ ಅನ್ನ ತಿನ್ನಿಸುವುದರಿಂದ ಹಿಡಿದು ಲಾಲಿ ಹಾಡಿ ಮಲಗಿಸುವವರೆಗೆ ಮೊಬೈಲ್ ಅನಿವಾರ್ಯವಾಗಿದೆ. ಅಪ್ಪ-ಅಮ್ಮಂದಿರೇ ಮುಂದಾಗಿ ರೀಲ್ಸ್ ಮಾಡುವುದು, ಹಂಚಿಕೊಳ್ಳುವುದು, ಸಂಭ್ರಮಿಸುವುದು ಅತಿಯಾಗಿದೆ. ಆದರೆ, ಮೊಬೈಲ್ ಅಡಿಕ್ಷನ್‌ಗೆ ಬಿದ್ದ ಮಕ್ಕಳನ್ನು ಆ ಗೀಳಿನಿಂದ ಬಿಡಿಸುವುದು, ದೂರ ಇರಿಸುವುದು ಹೇಗೆ ಎಂಬುದು ಈಗ ಬದುಕಿನ ಬಹುದೊಡ್ಡ ಬಿಕ್ಕಟ್ಟಾಗಿದೆ. ಕುಟುಂಬಗಳ ಕಲಹಕ್ಕೆ ಕಾರಣವಾಗಿದೆ. ಶಾಂತಿ-ನೆಮ್ಮದಿ ಕಿತ್ತುಕೊಂಡು ಸಮಸ್ಯೆ ಸೃಷ್ಟಿಸುತ್ತಿದೆ. ಹಾಗೆಯೇ ಇದು, ಹದಿಹರೆಯದವರಲ್ಲಿ ಹೆಚ್ಚುತ್ತಿರುವ ಮಾನಸಿಕ ಅಸ್ವಸ್ಥತೆ ಮತ್ತು ಆತ್ಮಹತ್ಯೆಯ ಆಲೋಚನೆಗಳಿಗೆ ಪ್ರಚೋದನೆ ನೀಡುತ್ತಿದೆ ಎಂಬ ತಜ್ಞರ ಆತಂಕವನ್ನು ನಿಜ ಮಾಡಿದೆ.

ಸುಮಾರು 20 ವರ್ಷಗಳ ಹಿಂದೆ, 2007ರಲ್ಲಿ ರಾಜ್ಯ ಸರ್ಕಾರ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲಾಗುತ್ತಿರುವ ದುಷ್ಪರಿಣಾಮಗಳ ಹಿನ್ನೆಲೆಯಲ್ಲಿ 16 ವರ್ಷದೊಳಗಿನ ಮಕ್ಕಳು ಮೊಬೈಲ್ ಬಳಸುವುದನ್ನು ನಿಷೇಧಿಸುವ ಮಹತ್ವದ ನಿರ್ಧಾರ ತೆಗೆದುಕೊಂಡಿತ್ತು. ಶಾಲಾ ಆವರಣದಲ್ಲಿ ಮೊಬೈಲ್ ಬಳಸಿದರೆ, ಅದನ್ನು ಕಿತ್ತುಕೊಳ್ಳಲು ಶಿಕ್ಷಕರಿಗೆ ಅಧಿಕಾರ ನೀಡಲಾಗಿತ್ತು. ಆದರೆ, ಮೊಬೈಲ್ ಕಂಪನಿಗಳು ಕೋರ್ಟ್ ಮೆಟ್ಟಿಲು ಹತ್ತಿ, ನಿಷೇಧ ಹಿಂತೆಗೆದುಕೊಳ್ಳುವಂತೆ ನೋಡಿಕೊಂಡಿದ್ದವು.

ಮೊಬೈಲ್ ಕಂಪನಿಗಳ ಅದೃಷ್ಟಕ್ಕೆ ಕೊರೋನ ಅವಕಾಶಗಳ ದಿಡ್ಡಿಬಾಗಿಲನ್ನೇ ತೆರೆಯಿತು. ಆನ್‌ಲೈನ್ ಕ್ಲಾಸ್ ಆರಂಭವಾಗಿ ಅಧಿಕೃತವಾಗಿ ವಿದ್ಯಾರ್ಥಿಗಳಿಗೆ ಮೊಬೈಲ್ ಮುಖ್ಯ ಎಂಬ ಸಂದರ್ಭ ಸೃಷ್ಟಿಯಾಯಿತು. ಶಾಲಾ-ಕಾಲೇಜುಗಳ ಶಿಕ್ಷಕರು-ಅಧ್ಯಾಪಕರೇ ಮುಂದಾಗಿ, ಸಮಯ ಮತ್ತು ಸುರಕ್ಷತೆಯ ನೆಪದಲ್ಲಿ ಮೊಬೈಲ್ ಬೇಕು ಎಂದರು. ಪೋಷಕರು ಅನಿವಾರ್ಯವಾಗಿ ಓದುವ ಮಕ್ಕಳ ಕೈಗೆ ಮೊಬೈಲ್ ಕೊಟ್ಟರು. ಅವರ ಮೇಲೆ ನಿಗಾ ಇಡುವುದನ್ನು ಮರೆತರು.

ಶಾಲಾಮಕ್ಕಳ ಕೈಗೆ ಮೊಬೈಲ್ ಸಿಕ್ಕಾಗ, ಅವರು ಒಬ್ಬಂಟಿಯಾಗಿದ್ದಾಗ, ಉಚಿತ ಸಾಮಾಜಿಕ ವೇದಿಕೆ ಒದಗಿಸುವ ಫೇಸ್‌ಬುಕ್, ಇನ್ಸ್ಟಾಗ್ರಾಮ್, ಕಿಕ್, ರೆಡ್ಡಿಟ್, ಸ್ನ್ಯಾಪ್ ಚಾಟ್, ಥ್ರೆಡ್ಸ್, ಎಕ್ಸ್, ಯೂಟ್ಯೂಬ್ ಮತ್ತು ಟ್ವಿಚ್‌ಗಳ ದಾಸರಾದರು. ಸುಲಭಕ್ಕೆ ಸಿಗುವ ಪೋರ್ನ್ ಸೈಟ್‌ಗಳನ್ನು ಜಾಲಾಡುವ, ಅದರ ಗೀಳಿಗೆ ಬೀಳುವ, ಓದಿನಲ್ಲಿ ಹಿಂದೆ ಬೀಳುವ, ಒಂಟಿಯಾಗಿರುವ ಮನಸ್ಥಿತಿಗೆ ಬಂದರು. ಮುಂದುವರೆದು ಆನ್‌ಲೈನ್ ಆಟಗಳಲ್ಲಿ ಮುಳುಗಿಹೋಗುವ, ಬೆಟ್ಟಿಂಗ್ ದಂಧೆಗಳಲ್ಲಿ ಭಾಗಿಯಾಗಿ ಹಣ ಕಳೆದುಕೊಳ್ಳುವ, ಸೋತಾಗ ಮಾನಸಿಕ ಖಿನ್ನತೆಗೆ ಜಾರುವ ಸ್ಥಿತಿ ಕೂಡ ಸಾಮಾನ್ಯವಾಗಿದೆ.

ಮುಂದುವರೆದು ಈಗ, ಎಲಾನ್ ಮಸ್ಕ್ ಒಡೆತನದ ಎಕ್ಸ್(ಟ್ವಿಟರ್)ನಲ್ಲಿ ಉಚಿತವಾಗಿ ಸಿಗುವ ಕೃತಕ ಬುದ್ಧಿಮತ್ತೆ ಸಾಧನ ಗ್ರೋಕ್ ಮೂಲಕ ಲೈಂಗಿಕವಾಗಿ ತಿರುಚಲಾದ ಚಿತ್ರಗಳನ್ನು ಸೃಷ್ಟಿಸುವುದು ಕೂಡ ಚಾಲ್ತಿಗೆ ಬಂದಿದೆ. ಅವು ಮುಖ್ಯವಾಗಿ ಹೆಣ್ಣುಮಕ್ಕಳನ್ನೇ ಟಾರ್ಗೆಟ್ ಮಾಡುತ್ತಿವೆ. ಬೆದರಿಸುವುದಕ್ಕೆ, ದುರುಪಯೋಗಕ್ಕೆ ಬಳಕೆಯಾಗುತ್ತಿವೆ. ನಿಯಂತ್ರಣವಿಲ್ಲದ ಡಿಜಿಟಲ್ ಲೋಕದಿಂದಾಗಿ ಇಂದು ನಮ್ಮ ಮಕ್ಕಳು ಒಂಟಿಯಾಗಿ ಎದುರಿಸಲಾಗದಂತಹ ಅಪಾಯಕಾರಿ ಜಾಗಕ್ಕೆ ತೆರೆದುಕೊಳ್ಳುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳು ವ್ಯಸನ, ನಿಂದನೆ, ಅಶ್ಲೀಲತೆ, ಮಾನಸಿಕ ಖಿನ್ನತೆ ಮತ್ತು ಹಿಂಸೆಯ ತಾಣಗಳಾಗುತ್ತಿವೆ. ಜೊತೆಗೆ ಸಾಮಾಜಿಕ ಜಾಲತಾಣ ಕಂಪನಿಗಳು ಕೇವಲ ಲಾಭಕ್ಕಾಗಿ ಅಲ್ಗಾರಿದಮ್‌ಗಳನ್ನು ಬಳಸಿಕೊಂಡು ತಪ್ಪು ಮಾಹಿತಿ ಮತ್ತು ದ್ವೇಷವನ್ನು ಹರಡುವ ವೇದಿಕೆಗಳಾಗಿ ಮಾರ್ಪಟ್ಟಿವೆ.

ಇದೆಲ್ಲ ಅತಿಯಾಯಿತು ಎನಿಸಿದಾಗ, ಮೊಟ್ಟ ಮೊದಲ ಬಾರಿಗೆ ಆಸ್ಟ್ರೇಲಿಯಾ ಎಚ್ಚೆತ್ತುಕೊಂಡಿತು. ತಂತ್ರಜ್ಞಾನ ಬಳಕೆ, ಗೌಪ್ಯತೆ, ಮಕ್ಕಳ ಸುರಕ್ಷತೆ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಕಾಳಜಿ ವಹಿಸಿತು. 16 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಸೋಷಿಯಲ್ ಮೀಡಿಯಾ ಪ್ರವೇಶವನ್ನು ನಿಷೇಧಿಸುವ ಕಾನೂನನ್ನು ಜಾರಿಗೆ ತಂದಿತು. ವಿಚಲಿತಗೊಂಡ ವಿಶ್ವದ ಕೆಲವು ದೊಡ್ಡ ತಂತ್ರಜ್ಞಾನ ಕಂಪೆನಿಗಳು ಕೋರ್ಟ್ ಮೆಟ್ಟಿಲು ಹತ್ತಿದವು. ಆದರೆ ಸರ್ಕಾರ ದೃಢ ನಿಲುವು ತಾಳಿತು. ಅದರ ಫಲವಾಗಿ ಆಸ್ಟ್ರೇಲಿಯಾದಲ್ಲಿ ಈಗ ಮಕ್ಕಳಿಗೆ ಸೇರಿದ ಸುಮಾರು 4.7 ಮಿಲಿಯನ್ ಖಾತೆಗಳು ರದ್ದುಗೊಂಡಿವೆ. ಫೇಸ್‌ಬುಕ್, ಇನ್ಸ್ಟಾಗ್ರಾಮ್ ಮತ್ತು ಥ್ರೆಡ್‌ಗಳನ್ನು ಹೊಂದಿರುವ ಮೆಟಾ, ನಿಷೇಧ ಜಾರಿಗೆ ಬಂದ ಮರುದಿನವೇ ಸುಮಾರು 5,50,000 ಖಾತೆಗಳನ್ನು ತೆಗೆದುಹಾಕಿದೆ. ಇದೀಗ ಫ್ರಾನ್ಸ್, ಡೆನ್ಮಾರ್ಕ್, ಆಸ್ಟ್ರಿಯಾ ಮತ್ತು ಬ್ರಿಟನ್ ಸರ್ಕಾರಗಳು ಕೂಡ ಇದೇ ರೀತಿಯ ಕಾನೂನು ಜಾರಿಗೆ ತರಲು ಚಿಂತಿಸುತ್ತಿವೆ.

ಮೊನ್ನೆ ಸ್ಪೇನ್ ಪ್ರಧಾನಿ ಪೆಡ್ರೊ ಸ್ಯಾಂಚೆಜ್, ನಮ್ಮ ಮಕ್ಕಳು ಒಬ್ಬಂಟಿಯಾಗಿರುವಾಗ ಹೋಗಬಾರದಂತಹ ವಾತಾವರಣಕ್ಕೆ ಹೋಗುತ್ತಿದ್ದಾರೆ. ನೋಡಬಾರದಂತಹ ಚಿತ್ರಗಳನ್ನು ಸುಲಭವಾಗಿ ನೋಡುತ್ತಿದ್ದಾರೆ. ಇನ್ನು ಮುಂದೆ ಇದನ್ನು ನಾವು ಸಹಿಸುವುದಿಲ್ಲ. ನಮ್ಮ ಸರ್ಕಾರ ಇದರ ಬಗ್ಗೆ ಕಣ್ಣು ಮುಚ್ಚಿ ಕುಳಿತುಕೊಳ್ಳಲು ಸಾಧ್ಯವಿಲ್ಲ ಎಂದು ಯುವಪೀಳಿಗೆಯನ್ನು ಆನ್‌ಲೈನ್ ಕಂಟೆಂಟ್‌ನ ದುಷ್ಪರಿಣಾಮಗಳಿಂದ ರಕ್ಷಿಸಲು ಮುಂದಾಗಿದೆ.

ಈಗ, ಪ್ರಧಾನಿ ಮೋದಿಯವರು ಕೂಡ ಈ ಬಗ್ಗೆ ಗಂಭೀರ ಚಿಂತನೆಗಿಳಿಯಬೇಕಾಗಿದೆ. ದೇಶದ ಭಾವಿ ಪ್ರಜೆಗಳನ್ನು ಮೊಬೈಲ್ ಮಾಯಾಂಗನೆಯಿಂದ ಬಚಾವು ಮಾಡಬೇಕಿದೆ. ಅದಕ್ಕಾಗಿ ಕಟ್ಟುನಿಟ್ಟಿನ ಕಾಯ್ದೆ-ಕಾನೂನುಗಳನ್ನು ಜಾರಿಗೆ ತರಬೇಕಿದೆ. ಅದಕ್ಕಿಂತಲೂ ಮುಖ್ಯವಾಗಿ, ನಮಗೆ ನಾವೇ ನಿಯಂತ್ರಣ ಹೇರಿಕೊಳ್ಳಬೇಕಾಗಿದೆ. ಇತಿ-ಮಿತಿ ಎನ್ನುವುದನ್ನು ಬದುಕಿನ ಭಾಗವನ್ನಾಗಿ ಮಾಡಿಕೊಳ್ಳಬೇಕಾಗಿದೆ.

ನಮ್ಮ ಕೈಗೆ ಮೊಬೈಲ್ ಬಂದಾಗ, ಇಡೀ ಪ್ರಪಂಚವೇ ನಮ್ಮ ಬೆರಳತುದಿಯಲ್ಲಿ ಎಂದು ಬೀಗಿದ್ದೆವು. ಆದರೆ ಈಗ, ಎಲ್ಲವನ್ನು ಸುಲಭವಾಗಿಸಿಕೊಳ್ಳುವ ನಿಟ್ಟಿನಲ್ಲಿ ನಮ್ಮ ಬದುಕಿನೊಳಕ್ಕೇ ಬಿಟ್ಟುಕೊಂಡಿದ್ದೇವೆ. ಆ ಮೊಬೈಲ್ ಆಡಿಸಿದಂತೆ ಆಡುವ ಕೀಲುಗೊಂಬೆಗಳಾಗಿದ್ದೇವೆ. ಇದು ಮುಂದುವರೆದರೆ, ಗಾಝಿಯಾಬಾದ್‌ನಲ್ಲಾದ ದುರ್ಘಟನೆ ನಮ್ಮ ಮನೆಯಲ್ಲೂ ಘಟಿಸಬಹುದು. ಅದಾಗದಂತೆ ಎಲ್ಲರೂ ಎಚ್ಚರ ವಹಿಸಬೇಕಾಗಿದೆ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಆನ್‌ಲೈನ್ ಗೇಮ್ ಚಟಕ್ಕೆ ಬಿದ್ದು ಬದುಕು ಕಳೆದುಕೊಂಡ ಬಾಲೆಯರು; ಏನಿದು ಕೊರಿಯನ್ ಗೇಮ್?

ಇಂದಿನ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಬಹುಬೇಗನೆ ವಿಡಿಯೊ ಗೇಮ್‌ಗಳಿಗೆ ಮನಸೋಲುತ್ತಿದ್ದಾರೆ. ಅದರಲ್ಲೂ ಕೆಲವು ಹಿಂಸಾತ್ಮಕ ವಿಡಿಯೋ ಗೇಮ್‌ಗಳು ಅವರನ್ನು ಹೆಚ್ಚು ಸೆಳೆಯುತ್ತಿವೆ. ಈಗೀನ ಮಕ್ಕಳಿಗೆ ಮೈದಾನದಲ್ಲಿ ಹೋಗಿ ಆಡುವುದಕ್ಕಿಂತ ಗ್ಯಾಜೆಟ್‌ಗಳಲ್ಲಿ ಆಡುವುದೇ ಪ್ರಿಯವಾಗಿದೆ.

ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು - ದೇಶದ ಭವಿಷ್ಯವು ಇಂದಿನ ಮಕ್ಕಳ ಶಿಕ್ಷಣ, ಸಂಸ್ಕಾರ ಮತ್ತು ಆರೋಗ್ಯದ ಮೇಲೆ ಅವಲಂಬಿತವಾಗಿದೆ ಎಂದು ಸಾರುವ ಮಹತ್ವದ ನಾಣ್ಣುಡಿ. ಪ್ರತಿಯೊಂದು ದೇಶದ ಭವಿಷ್ಯವು ಆ ದೇಶದ ಮಕ್ಕಳು ಮತ್ತು ಯುವಕರ ಕೈಯಲ್ಲಿದೆ ಎಂಬುದು ಅಕ್ಷರಶಃ ಸತ್ಯ. ಆದರೆ, ಇಂದಿನ ಕಾಲಮಾನದಲ್ಲಿ ಆ ಭವಿಷ್ಯವೇ ನಿಧಾನವಾಗಿ ಮೊಬೈಲ್ ಪರದೆ ಹಿಂದೆ ಸಿಲುಕುತ್ತಿರುವುದು ಆತಂಕಕಾರಿ ಸಂಗತಿ. ಮೊಬೈಲ್ ಇಲ್ಲದೇ ಊಟ ಸೇವಿಸುವುದಿಲ್ಲ ಎನ್ನುವಷ್ಟರ ಮಟ್ಟಿಗೆ ಮಕ್ಕಳು ಮೊಬೈಲ್ ದಾಸರಾಗಿದ್ದಾರೆ. ಆಟ, ಸಂಭಾಷಣೆ, ಕಲಿಕೆ ಎಲ್ಲವೂ ಮೊಬೈಲ್ ಪರದಿಯಾಚೆಗೆ ಸರಿದಿರುವ ಈ ಕಾಲಘಟ್ಟದಲ್ಲಿ ಮಕ್ಕಳ ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆ ಗಂಭೀರ ಅಪಾಯದ ಅಂಚಿನಲ್ಲಿದೆ.

ಅಂಗೈಯಲ್ಲಿ ಇಡೀ ಜಗತ್ತನ್ನು ತೋರಿಸುವ ಸ್ಮಾರ್ಟ್ ಫೋನ್‌ಗಳು ನಮ್ಮ ಬದುಕಿನ ಭಾಗವೇ ಆಗಿಹೋಗಿವೆ. ಸಂವಹನದ ಪ್ರಾಥಮಿಕ ಉದ್ದೇಶದೊಂದಿಗೆ ಅಭಿವೃದ್ಧಿಗೊಂಡ ಮೊಬೈಲ್‌ಗಳು ಇದೀಗ ಸ್ಮಾರ್ಟ್ ಫೋನ್‌ಗಳಾಗಿ ರೂಪಾಂತರಗೊಂಡು ನಮ್ಮ ಬದಕನ್ನು ಸ್ಮಾರ್ಟ್ ಆಗಿಸಿವೆ. ಆದರೆ, ಸ್ಮಾರ್ಟ್‌ಫೋನ್‌ನ ಅತಿಯಾದ ಬಳಕೆ ಮತ್ತು ಅದು ಒದಗಿಸುವ ಅಪರಿಮಿತ ಸೌಲಭ್ಯ, ಗೇಮಿಂಗ್ ಎಲ್ಲವೂ ಇಂದಿನ ಯುವಜನತೆಯನ್ನು ಅಡಿಕ್ಟ್ ಆಗುವಂತೆ ಮಾಡಿವೆ. ಸಕಾರಾತ್ಮಕ ಉದ್ದೇಶಕ್ಕೆ ಬಳಕೆಯಾಗಬೇಕಿದ್ದ ಈ ಸ್ಮಾರ್ಟ್‌ಫೋನ್‌ಗಳು, ವಿಡಿಯೊ ಗೇಮ್‌ಗಳಿಂದಾಗಿ ಅನೇಕರ ಜೀವವನ್ನು ತೆಗೆಯುವ ಸಾಧನಗಳಾಗಿ ಬದಲಾಗುತ್ತಿರವುದು ದುರಂತ.


ಹೌದು, ಪಬ್ ಜಿ, ಬ್ಲೂವೇಲ್, ಕೊರಿಯನ್ ಆನ್‌ಲೈನ್ ಗೇಮ್‌ಗಳಂತಹ ಅಪಾಯಕಾರಿ ಮೊಬೈಲ್ ಗೇಮ್‌ಗಳ ಗೀಳಿಗೆ ಸಿಲುಕಿ ನೈಜ ಬದುಕಿನಿಂದ ಡಿಜಿಟಲ್ ಜಗತ್ತಿಗೆ ಮಕ್ಕಳು ದಾಸರಾಗುತ್ತಿದ್ದಾರೆ. ನೈಜ ಜೀವನದಿಂದ ದೂರವಾಗುತ್ತಿದ್ದಾರೆ. ಆಟವೆಂದು ಆರಂಭವಾದ ಈ ವ್ಯಸನ, ಕ್ರಮೇಣ ಮಾನಸಿಕ ಒತ್ತಡ, ಒಂಟಿತನ ಮತ್ತು ಭ್ರಮೆಗಳಾಗಿ ಮಾರ್ಪಟ್ಟು, ಅನೇಕ ಮಕ್ಕಳ ಅಮೂಲ್ಯ ಜೀವವನ್ನೇ ಕಿತ್ತುಕೊಳ್ಳುತ್ತಿದೆ. ಇದು ಕೇವಲ ಆಟದ ಸಮಸ್ಯೆಯಲ್ಲ, ಮಕ್ಕಳ ಜೀವನದ ಮೇಲಿನ ಮೌನ ದಾಳಿಯಾಗಿದೆ.

ಆನ್‌ಲೈನ್ ಗೇಮಿನ ಗೀಳಿಗೆ ಒಳಗಾಗಿ ಮೂವರು ಅಪ್ರಾಪ್ತ ಸಹೋದರಿಯರು ತಮ್ಮ ಪ್ರಾಣವನ್ನು ಕಳೆದುಕೊಂಡ ಹೃದಯ ವಿದ್ರಾವಕ ಘಟನೆ ಉತ್ತರಪ್ರದೇಶದ ಘಾಜಿಯಾಬಾದನಲ್ಲಿ ನಡೆದಿದೆ. ಮೂವರು ಸಹೋದರಿಯರು ಗಾಜಿಯಾಬಾದ್‌ನ ತಿಲಾ ಮೂಡ್ ಪೊಲೀಸ್ ಠಾಣೆ ಪ್ರದೇಶದಲ್ಲಿರುವ ಭಾರತ್ ಸಿಟಿ ಸೊಸೈಟಿಯ ಬಿ 1 ಟವರ್‌ನಲ್ಲಿ ವಾಸಿಸುತ್ತಿದ್ದರು.

ಮೃತ ಬಾಲಕಿಯರನ್ನು ಪಾಖಿ (12), ಪ್ರಾಚಿ (14) ಮತ್ತು ವಿಶಿಕಾ (16) ಎಂದು ಗುರುತಿಸಲಾಗಿದೆ. ಟಾಸ್ಕ್ ಆಧಾರಿತ ಆನ್‌ಲೈನ್ ಕೊರಿಯನ್ ಲವ್ ಗೇಮ್‌ನ ಚಟಕ್ಕೆ ಬಿದ್ದಿದ್ದ ಮೂವರು ಸಹೋದರಿಯರು ಕೊರಿಯಾದ ಬಗ್ಗೆ ತೀವ್ರವಾದ ಹುಚ್ಚು ಅಂಟಿಸಿಕೊಂಡಿದ್ದರು.

ಮಕ್ಕಳ ಅತಿಯಾದ ಮೊಬೈಲ್ ವೀಕ್ಷಣೆಗೆ ಬೇಸತ್ತಿದ್ದ ಪೋಷಕರು ಮಕ್ಕಳಿಗೆ ಮೊಬೈಲ್ ಅತಿಯಾಗಿ ಬಳಸದಂತೆ ಇತ್ತೀಚೆಗೆ ನಿರ್ಬಂಧಿಸಿದ್ದರು. ಇದರಿಂದ ಕಿರಿಕಿರಿಗೊಂಡ ಮೂವರು ಸಹೋದರಿಯರು ಬುಧವಾರ ನಸುಕಿನ 2.45ರ ವೇಳೆಗೆ ಅಪಾರ್ಟ್‌ಮೆಂಟ್‌ನ 9ನೇ ಮಹಡಿಯಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ವರದಿಯೊಂದು ತಿಳಿಸುತ್ತದೆ.

ಮತ್ತೊಂದು ವರದಿಯ ಪ್ರಕಾರ, ಕೊರಿಯನ್ ಗೇಮ್‌ನ ಕೊನೆಯ ಮತ್ತು 50ನೇ ಆಟ ಆತ್ಮಹತ್ಯೆಯಾಗಿತ್ತು. ಈ ಕಾರಣಕ್ಕೇ ಮಕ್ಕಳು ಆತ್ಮಹತ್ಮೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ.



ಮನೆಯಲ್ಲಿ ಎಲ್ಲರೂ ಮಲಗಿದ ವೇಳೆ ನೀರು ಕುಡಿಯುವ ನೆಪದಲ್ಲಿ ಎದ್ದು ಮತ್ತೆ ರೂಮ್‌ನ ಬೀಗ ಹಾಕಿಕೊಂಡ ಮಕ್ಕಳು ಬಾಲ್ಕನಿಯಿಂದ ಕೆಳಗೆ ಹಾರಿದ್ದಾರೆ. ಇಬ್ಬರು ಸಹೋದರಿಯರು ಪರಸ್ಪರ ಕೈ ಹಿಡಿದು ಒಟ್ಟಿಗೆ ಕೆಳಗೆ ಜಿಗಿದಿದ್ದರೇ, ಮೂರನೆಯವಳು ಮನೆಯ ಪ್ರಾರ್ಥನಾ ಕೋಣೆಯ ಕಿಟಕಿಯಿಂದ ಒಂಟಿಯಾಗಿ ಹಾರಿದ್ದಾಳೆ ಎಂದು ತನಿಖೆ ವೇಳೆ ಪೊಲೀಸರು ತಿಳಿಸಿದ್ದಾರೆ.

ವಿಷಯ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು, ಸಹೋದರಿಯರನ್ನ ಹತ್ತಿರದ ಕಾಲೋನಿಯಲ್ಲಿರುವ ಆಸ್ಪತ್ರೆಗೆ ಕರೆತಂದಿದ್ದರು. ಆದರೆ, ಅವರನ್ನು ಪರೀಕ್ಷಿಸಿದ ವೈದ್ಯರು, ಇವರೆಲ್ಲ ಮೃತಪಟ್ಟಿದ್ದಾರೆ ಎಂದು ಘೋಷಿಸಿದ್ದಾರೆ. ಈ ಘಟನೆ ಘಾಜಿಯಾಬಾದ್‌ನಲ್ಲಿ ಸಂಚಲನ ಸೃಷ್ಟಿಸಿದೆ. ಹಲವು ಕುಟುಂಬದವರು ಆಘಾತಕ್ಕೆ ಒಳಗಾಗಿದ್ದಾರೆ. ಆನ್‌ಲೈನ್ ವ್ಯಸನದ ಅಪಾಯಗಳು ಮತ್ತು ಯುವ ಮನಸ್ಸು ಗಳ ಮೇಲೆ ಅದರ ಪ್ರಭಾವದ ಬಗ್ಗೆ ಅವರೆಲ್ಲ ಚಿಂತಿತರಾಗಿದ್ದಾರೆ.

ಟ್ರು ಲೈಫ್ ಸ್ಟೋರಿ, ಇಸ್ ಡೈರಿ ಮೇ ಜೋ ಕುಚ್ ಭೀ ಲಿಖಾ ಹೇ, ವೊ ಸಬ್ ಫಡ್ಲೊ, ಕ್ಯುಂಕಿ ಯೆ ಸಬ್ ಸಚ್ ಹೇ. ರೀಡ್ ನೌ ಐ ಆಮ್ ರೀಯಲಿ ಸಾರಿ ಸಾರಿ ಪಪ್ಪಾಎಂದು ಬರೆದ ಚಿಕ್ಕ ಪುಟದ ಆತ್ಮಹತ್ಯೆ ಪತ್ರವೊಂದು ಪತ್ತೆಯಾಗಿದೆ. ಆ ಡೆತ್‌ನೋಟ್‌ನಲ್ಲಿ ಕಣ್ಣೀರಿನ ಎಮೋಜಿಯನ್ನು ಸಹ ಬರೆಯಲಾಗಿದೆ. ಸದ್ಯ ಪೊಲೀಸರು ಡೆತ್‌ನೋಟ್ ಅನ್ನು ವಶಪಡಿಸಿಕೊಂಡಿದ್ದಾರೆ. ರೂಮಿನಲ್ಲಿ ನೆಲದ ಮೇಲೆ ಹರಡಿದ್ದ ಕುಟುಂಬ ಸದಸ್ಯರ ಫೋಟೋಗಳು ಸಹ ಕಂಡುಬಂದಿವೆ.

ಮಕ್ಕಳು ಬರೆದಿಟ್ಟ 8 ಪುಟಗಳಲ್ಲಿದ್ದ ಡೈರಿಯಲ್ಲಿ, ಪಾಪಾ ಕ್ಷಮಿಸಿ, ಹಮ್ ಕೊರಿಯಾ ನಹಿ ಛೋಡ್ ಸಕ್ತೇ. ಕೊರಿಯಾ ಹಮಾರಿ ಜಿಂದಗಿ ಹೈ, ಕೊರಿಯಾ ಹಮಾರಿ ಜಾನ್ ಹೈ, ಔರ್ ಆಪ್ ಹಮೇ ನಹಿ ಛುಡಾ ಸಕ್ತೇ. ಕ್ಷಮಿಸಿ, ಹಮ್ ಜಾನ್ ದೇ ರಹೇ ಹೈ'' (ಪಪ್ಪಾ, ಕ್ಷಮಿಸಿ. ನಾವು ಕೊರಿಯಾವನ್ನು ಬಿಡಲು ಸಾಧ್ಯವಿಲ್ಲ. ಕೊರಿಯಾ ನಮ್ಮ ಜೀವನ, ಕೊರಿಯಾ ನಮ್ಮ ಆತ್ಮ, ಮತ್ತು ನೀವು ಅದರಿಂದ ನಮ್ಮನ್ನು ಬೇರ್ಪಡಿಸಲು ಸಾಧ್ಯವಿಲ್ಲ. ಕ್ಷಮಿಸಿ, ನಾವು ನಮ್ಮ ಜೀವನವನ್ನು ತ್ಯಜಿಸುತ್ತಿದ್ದೇವೆ) ಎಂದು ಬರೆದುಕೊಂಡಿದ್ದಾರೆ.

''ಮನೆಯಲ್ಲಿ ಹುಡುಗಿಯರು ಬಳಸುತ್ತಿದ್ದ ವಸ್ತುಗಳನ್ನು ಪರಿಶೀಲಿಸುತ್ತಿದ್ದಾಗ ಈ ಡೈರಿಯನ್ನು ವಶಪಡಿಸಿಕೊಳ್ಳಲಾಗಿದೆ. ಈ ಮೂವರು ಸಹೋದರಿಯರು ಕಳೆದ ಎರಡು ವರ್ಷಗಳಿಂದ ಶಾಲೆಗೆ ಹೋಗಿಲ್ಲ, ಮನೆಯಲ್ಲಿದ್ದರು'' ಎಂದು ಪೊಲೀಸರು ತಿಳಿಸಿದ್ದಾರೆ.

ಆರ್ಥಿಕ ಸಮಸ್ಯೆಯ ಕಾರಣ, ತಂದೆ ಮಕ್ಕಳನ್ನು ಶಾಲೆಗೆ ಕಳುಹಿಸಲು ಎಂದಿಗೂ ತಲೆಕೆಡಿಸಿಕೊಂಡಿರಲಿಲ್ಲ. ಕೊರಿಯನ್ ಕಾರ್ಯಕ್ರಮಗಳನ್ನು ನೋಡದಂತೆ ಒತ್ತಡ ಹೇರಿದ್ದ ತಮ್ಮ ತಂದೆಯ ಮೇಲೆ ಅಸಮಾಧಾನಗೊಂಡಿದ್ದರು ಎಂದು ಡೈರಿ ಬಹಿರಂಗಪಡಿಸುತ್ತದೆ.

ಮೂವರು ಸಹೋದರಿಯರು ಪರಸ್ಪರ ಒಬ್ಬರನ್ನೊಬ್ಬರು ತುಂಬಾ ಪ್ರೀತಿಸುತ್ತಿದ್ದರು. ಸ್ನಾನ ಮಾಡುವುದು, ಊಟ ತಿಂಡಿ ಮಾಡುವುದು, ಶಾಲೆಗೆ ಹೋಗುವುದು, ಮಲಗುವುದು ಎಲ್ಲವನ್ನೂ ಒಟ್ಟಿಗೆ ಮಾಡುತ್ತಿದ್ದರು. ವರದಿಗಳ ಪ್ರಕಾರ, ಮೂವರು ಸಹೋದರಿಯರು -19 ಸಮಯದಲ್ಲಿ ಆನ್‌ಲೈನ್ ಆಟಗಳನ್ನು ಆಡುವ ಅಭ್ಯಾಸವನ್ನು ಬೆಳೆಸಿಕೊಂಡರು. ಅವರು ಟಾಸ್ಕ್ ಆಧಾರಿತ ಆನ್‌ಲೈನ್ ಕೊರಿಯನ್ ಲವ್ ಗೇಮ್ ಆಡುತ್ತಿದ್ದರು ಎಂದು ತಿಳಿದು ಬಂದಿದೆ.

''ಹೆಣ್ಣುಮಕ್ಕಳು ಅಪಾಯಕಾರಿ ಆನ್‌ಲೈನ್ ಆಟದಲ್ಲಿ ಸಿಕ್ಕಿಹಾಕಿಕೊಂಡಿದ್ದಾರೆ ಎಂಬ ಬಗ್ಗೆ ಅನುಮಾನವೇ ಇರಲಿಲ್ಲ. ಅವರು ಕೊರಿಯನ್ ಆಟ ಆಡುತ್ತಿದ್ದರ ಬಗ್ಗೆ ನಮಗೆ ತಿಳಿದಿರಲಿಲ್ಲ. ಮಕ್ಕಳು ನಮಗೆ ಏನನ್ನೂ ಹೇಳಿಲ್ಲ. ಆದರೆ, ಆಗಾಗ ಅವರನ್ನ ಕೊರಿಯನ್‌ಗೆ ಕರೆದುಕೊಂಡು ಹೋಗುವಂತೆ ಕೇಳುತ್ತಿದ್ದರು'' ಎಂದು ಮೃತ ಮಕ್ಕಳ ತಂದೆ ಚೇತನ್ ಕುಮಾರ್ ಹೇಳಿದ್ದಾರೆ.

''ಸುಮಾರು 2-2.5 ವರ್ಷಗಳಿಂದ ನನ್ನ ಮಕ್ಕಳು ಆನ್‌ಲೈನ್ ಗೇಮ್ ಆಡುತ್ತಿದ್ದರು. ಪರಸ್ಪರ ಕೊರಿಯನ್ ಹೆಸರುಗಳಿಂದ ಕರೆಯುವ ಜತೆಗೆ ಪ್ರಾಚಿ ತನ್ನನ್ನು ತಾನು ಬಾಸ್ ಎಂದು ಕರೆದುಕೊಳ್ಳುತ್ತಿದ್ದಳು. ಅವಳ ಆಜ್ಞೆಗಳನ್ನು ಇನ್ನುಳಿದ ಮಕ್ಕಳು ಪಾಲಿಸುತ್ತಿದ್ದರು. ಆದರೆ, ಆ ಗೇಮ್‌ನಲ್ಲಿ ಅಪಾಯಕಾರಿ ಸವಾಲು (ಟಾಸ್ಕ್) ಇದ್ದ ಬಗ್ಗೆ ತಿಳಿದಿರಲಿಲ್ಲ'' ಎಂದಿದ್ದಾರೆ.

ಶಾಲಿಮಾರ್ ಗಾರ್ಡನ್‌ನ ಸಹಾಯಕ ಪೊಲೀಸ್ ಆಯುಕ್ತ, ಅತುಲ್ ಕುಮಾರ್ ಸಿಂಗ್ ಮಾತನಾಡಿ, ''ಸಹೋದರಿಯರು ಕೊರಿಯನ್ ಟಾಸ್ಕ್ ಆಧಾರಿತ ಸಂವಾದಾತ್ಮಕ ಲವ್ ಗೇಮ್‌ನ ವ್ಯಸನಿಯಾಗಿದ್ದರು. ಕಳೆದ ಕೆಲವು ದಿನಗಳಿಂದ ಅವರ ಪೋಷಕರು ತಮ್ಮ ಮೊಬೈಲ್ ಫೋನ್ ಬಳಕೆಯನ್ನು ನಿರ್ಬಂಧಿಸಿದ್ದರು. ಅದು ಅವರನ್ನು ಅಸಮಾಧಾನಗೊಳಿಸಿತ್ತು. ಇದು ಅವರು ಇಂತಹ ಅನಾಹುತಕಾರಿ ನಿರ್ಧಾರ ಕೈಗೊಳ್ಳಲು ಕಾರಣವಾಗಿದೆ'' ಎಂದು ಅವರು ಹೇಳಿದ್ದಾರೆ.

ಮೂವರು ಸಹೋದರಿಯರು ಕೊರಿಯನ್ ಹೆಸರುಗಳಾದ ಮಾರಿಯಾ, ಅಲಿಜಾ ಮತ್ತು ಸಿಂಡಿ ಬಳಸಿಕೊಂಡು ಸಾಮಾಜಿಕ ಮಾಧ್ಯಮ ಖಾತೆ ಹೊಂದಿದ್ದರು. ಇನ್‌ಸ್ಟಾಗ್ರಾಮ್‌ನಲ್ಲಿ ಅಪಾರ ಸಂಖ್ಯೆಯ ಅನುಯಾಯಿಗಳನ್ನು ಹೊಂದಿದ್ದರು.

ಈ ಕೊರಿಯನ್ ಲವ್ ಗೇಮ್‌ನ ಪ್ರಭಾವಕ್ಕೆ ಒಳಗಾಗಿದ್ದ ಮಕ್ಕಳು ತಾವು ಭಾರತೀರಲ್ಲ. ಬದಲಾಗಿ ಕೊರಿಯನ್ನರು ಎಂಬ ಭಾವನೆ ಬೆಳೆಸಿಕೊಂಡಿದ್ದರು. ಕೊರಿಯನ್ ಲವ್ ಗೇಮ್ ಎಂದು ಕರೆಯಲಾಗುತ್ತಿರುವ ಈ ಗೇಮ್‌ನ ನಿಜವಾದ ಹೆಸರು ಏನೆಂದು ಅಧಿಕಾರಿಗಳು ಈವರೆಗೆ ಖಚಿತಪಡಿಸಿಲ್ಲ. ಮೂಲಗಳ ಪ್ರಕಾರ, ಈ ಆ್ಯಪ್‌ನಲ್ಲಿ ದಿನಕ್ಕೊಂದರಂತೆ 50 ಸವಾಲುಗಳನ್ನು ಹಾಕಲಾಗುತ್ತದೆ. ಆ ಸವಾಲುಗಳನ್ನು ಒಂದೊಂದಾಗಿ ಸಾಧಿಸುತ್ತ ಹೋಗಬೇಕು. ಇನ್ನು ಮಕ್ಕಳ ಸಾವಿಗೆ ಇದೇ ಆ್ಯಪ್‌ನ ಸವಾಲು ಪ್ರೇರೇಪಿಸಿರುವ ಶಂಕೆಯಿದೆ.

ಹೆಣ್ಣುಮಕ್ಕಳ ತಂದೆ ಚೇತನ್ ಕುಮಾರ್ ಎರಡು ಮದುವೆಯಾಗಿದ್ದರು. ಮೊದಲ ಹೆಂಡತಿಗೆ ಮಕ್ಕಳಾಗಿಲ್ಲ ಎಂದು ಚೇತನ್ ಪತ್ನಿಯ ತಂಗಿಯನ್ನೇ ಮದುವೆಯಾಗಿದ್ದರು. ಎರಡನೇ ಹೆಂಡತಿಗೆ ಮೂವರು ಮಕ್ಕಳು. ಇದೇ ವೇಳೆ ಮೊದಲನೇ ಹೆಂಡತಿಗೆ ಇಬ್ಬರು ಮಕ್ಕಳಾಗಿದ್ದಾರೆ. ಒಬ್ಬ ಗಂಡ, ಇಬ್ಬರು ಹೆಂಡತಿಯರು, ಐವರು ಮಕ್ಕಳು ಒಂದೇ ಮನೆಯಲ್ಲಿ ವಾಸವಾಗಿದ್ದರು. ಈ ಪೈಕಿ ಮೊದಲ ಹೆಂಡತಿಯ ಒಬ್ಬಳು ಮಗಳು, ಎರಡನೇ ಹೆಂಡತಿಯ ಇಬ್ಬರು ಪುತ್ರಿಯರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇನ್ನು 2017ರಲ್ಲಿ ಬ್ಲೂವೇಲ್ ಎಂಬ ರಷ್ಯಾ ಮೂಲದ ಗೇಮ್ ಕೂಡ ಜಗತ್ತಿನಾದ್ಯಂತ ಭಾರೀ ವೈರಲ್ ಆಗಿತ್ತು. ಅದರಲ್ಲೂ ಕೂಡ ದಿನಕ್ಕೊಂದು ಸವಾಲು ನೀಡುವುದು ಮತ್ತು ಅಂತಿಮವಾಗಿ ಸಾವನ್ನಪ್ಪುವ ಟಾಸ್ಕ್ ನೀಡಲಾಗುತ್ತಿತ್ತು. ಇದಕ್ಕೆ ರಷ್ಯಾ ಮೊದಲಾದ ದೇಶಗಳಲ್ಲಿ 130ಕ್ಕೂ ಹೆಚ್ಚು ಮಂದಿ ಸಾವನ್ನಪ್ಪಿದ್ದರು. ಮುಂಬೈನಲ್ಲೂ ಬಾಲಕನೊಬ್ಬ ಸಾವನ್ನಪ್ಪಿದ್ದ ಘಟನೆ ನಡೆದಿತ್ತು.

ಇಂದಿನ ತಂತ್ರಜ್ಞಾನ ಯುಗದಲ್ಲಿ ಮಕ್ಕಳು ಬಹುಬೇಗನೆ ವಿಡಿಯೊ ಗೇಮ್‌ಗಳಿಗೆ ಮನಸೋಲುತ್ತಿದ್ದಾರೆ. ಅದರಲ್ಲೂ ಕೆಲವು ಹಿಂಸಾತ್ಮಕ ವಿಡಿಯೋ ಗೇಮ್‌ಗಳು ಅವರನ್ನು ಹೆಚ್ಚು ಸೆಳೆಯುತ್ತಿವೆ. ಈಗೀನ ಮಕ್ಕಳಿಗೆ ಮೈದಾನದಲ್ಲಿ ಹೋಗಿ ಆಡುವುದಕ್ಕಿಂತ ಗ್ಯಾಜೆಟ್‌ಗಳಲ್ಲಿ ಆಡುವುದೇ ಪ್ರಿಯವಾಗಿದೆ.

ಪೋಷಕರಿಗೆ ಎಷ್ಟೇ ಕೆಲಸದ ಒತ್ತಡವಿದ್ದರೂ, ಏನೇ ಸಮಸ್ಯೆಗಳಿದ್ದರೂ ಮಕ್ಕಳ ಭವಿಷ್ಯದ ದೃಷ್ಟಿಯಿಂದ ಅವರ ನಡುವಳಿಕೆಯನ್ನು ಸೂಕ್ಷ್ಮವಾಗಿ ಗಮನಿಸಬೇಕಾಗಿದೆ. ಮಕ್ಕಳಿಗೆ ಉತ್ತಮ ಶಿಕ್ಷಣ, ನೈತಿಕ ಮೌಲ್ಯಗಳು ಮತ್ತು ಸೌಲಭ್ಯಗಳನ್ನು ನೀಡಿ, ಅವರನ್ನು ಜವಾಬ್ದಾರಿಯುತ ನಾಗರಿಕರನ್ನಾಗಿ ಬೆಳೆಸುವುದು ಎಲ್ಲರ ಕರ್ತವ್ಯವಾಗಿದೆ.

ಮನರೇಗಾ ಮರು ಜಾರಿಗೆ ಸ್ಟಾಲಿನ್ ಸರ್ಕಾರ ಆಗ್ರಹ: ವಿಬಿ ಜಿ ರಾಮ್ ಜಿ ವಿರುದ್ಧ ಅಂಗೀಕರಿಸಿದ ಗೊತ್ತುವಳಿಗಳೇನು?

ತಮಿಳುನಾಡು ವಿಧಾನಸಭೆಯಲ್ಲಿ ಅಂಗೀಕಾರಗೊಂಡ ಗೊತ್ತುವಳಿಯು ಕೇವಲ ಒಂದು ರಾಜಕೀಯ ಹೇಳಿಕೆಯಲ್ಲದೆ, ಗ್ರಾಮೀಣ ಭಾರತದ ಜೀವನೋಪಾಯ ರಕ್ಷಣೆಗಾಗಿ ಕೈಗೊಂಡಿರುವ ಒಂದು ದೃಢ ನಿಲುವು. ಕೇಂದ್ರ ಸರ್ಕಾರದ ಪ್ರತಿಕ್ರಿಯೆಯು ಭವಿಷ್ಯದ ನಿರ್ಣಯಗಳನ್ನು ನಿರ್ಧರಿಸಲಿದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ(ಮನರೇಗಾ)ಯನ್ನು ಮರುನಾಮಕರಣ ಮಾಡುವ ಮತ್ತು ಅದರ ಹಣಕಾಸು ರಚನೆಯನ್ನು ಬದಲಾಯಿಸುವ ಕೇಂದ್ರ ಸರ್ಕಾರದ ವಿಬಿ ಜಿ ರಾಮ್ ಜಿ ಯೋಜನೆ ಜಾರಿ ಪ್ರಸ್ತಾಪವನ್ನು ವಿರೋಧಿಸಿ ತಮಿಳುನಾಡು ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ಮಂಡಿಸಿದ ನಿರ್ಣಯವನ್ನು ವಿಧಾನಸಭೆಯು ಅಂಗೀಕರಿಸಿದೆ.

ಗ್ರಾಮೀಣ ಉದ್ಯೋಗ ಕಾರ್ಯಕ್ರಮಕ್ಕೆ ಮಹಾತ್ಮ ಗಾಂಧಿಯವರ ಹೆಸರನ್ನು ಉಳಿಸಿಕೊಳ್ಳಲು ಮತ್ತು ಕೆಲಸದ ನಿಜವಾದ ಬೇಡಿಕೆ ಮತ್ತು ರಾಜ್ಯವಾರು ಕಾರ್ಯಕ್ಷಮತೆಯ ಆಧಾರದ ಮೇಲೆ ಸಮರ್ಪಕ, ನಿರಂತರ ನಿಧಿ ಬಿಡುಗಡೆಯನ್ನು ಖಚಿತಪಡಿಸಿಕೊಳ್ಳುವಂತೆ ಕೇಂದ್ರವನ್ನು ಒತ್ತಾಯಿಸಿತು. ಮಹಿಳೆಯರು, ಅಂಗವಿಕಲರು, ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳು ಈ ಯೋಜನೆಯ ಪ್ರಾಥಮಿಕ ಫಲಾನುಭವಿಗಳಾಗಿ ಉಳಿದಿದ್ದಾರೆ ಎಂಬುದನ್ನು ಗಮನಿಸಿ, ಗ್ರಾಮೀಣ ನಾಗರಿಕರ ಕೆಲಸದ ಹಕ್ಕನ್ನು ರಕ್ಷಿಸಬೇಕು ಎಂಬುದು ನಿರ್ಣಯದಲ್ಲಿ ಅಡಕವಾಗಿದೆ.

ಮನರೇಗಾ ಮರುನಾಮಕರಣ : ಮಹಾತ್ಮಾ ಗಾಂಧೀಜಿ ಹೆಸರನ್ನು ತೆಗೆದುಹಾಕಿ ವಿಬಿ ಜಿ ರಾಮ್ ಜಿ ಯೋಜನೆಗೆ ಬದಲಾಯಿಸುವುದು ಖಂಡನೀಯ. ಇದರಿಂದ ರಾಷ್ಟ್ರಪಿತರ ಗೌರವವನ್ನು ಕಸಿದುಕೊಂಡಂತಾಗಿದೆ. ಅಲ್ಲದೆ ಗಾಂಧೀಜಿಯವರ ಕನಸಿನಂತೆ ಪ್ರತಿ ಗ್ರಾಮವು ಸ್ವಾವಲಂಬಿ, ಸ್ವಾಯತ್ತ ಮತ್ತು ತನ್ನ ಆಡಳಿತವನ್ನು ತಾನೇ ನಡೆಸುವ ವ್ಯವಸ್ಥೆ ಮನರೇಗಾದಲ್ಲಿದೆ. ಇದು ತಳಮಟ್ಟದಲ್ಲಿ ಪ್ರಜಾಪ್ರಭುತ್ವವನ್ನು ಬಲಪಡಿಸಲು, ಗ್ರಾಮೀಣ ಆರ್ಥಿಕತೆ, ಆರೋಗ್ಯ ಮತ್ತು ಮೂಲಸೌಕರ್ಯಗಳನ್ನು ಸ್ಥಳೀಯವಾಗಿಯೇ ಅಭಿವೃದ್ಧಿಪಡಿಸಲು ಪಂಚಾಯತ್ ರಾಜ್ ಸಂಸ್ಥೆಗಳನ್ನು ಸಶಕ್ತಗೊಳಿಸುವ ಪರಿಕಲ್ಪನೆಯಾಗಿದೆ. ಹಾಗಾಗಿ ಮನರೇಗಾ ಹೆಸರನ್ನು ಮರುನಾಮಕರಣ ಮಾಡಬೇಕು ಎಂಬ ಅಂಶ ನಿರ್ಣಯದಲ್ಲಿ ಅಡಗಿದೆ.

ಹಣಕಾಸು ಹಂಚಿಕೆ: ಮನರೇಗಾದಲ್ಲಿದ್ದ ಶೇ.100ರಷ್ಟು ಹಣಕಾಸು ಹಂಚಿಕೆಯ ಬದಲಿಗೆ ವಿಬಿ ಜಿ ರಾಮ್ ಜಿಯಲ್ಲಿ 60:40 (ಕೇಂದ್ರ:ರಾಜ್ಯ) ಅನುಪಾತದಲ್ಲಿರಲಿದೆ. ಈಶಾನ್ಯ ಮತ್ತು ಹಿಮಾಲಯನ್ ರಾಜ್ಯಗಳಿಗೆ 90:10 ಅನುಪಾತ ಇರಲಿದೆ. ಈ ಹೊಸ ವ್ಯವಸ್ಥೆಯು ರಾಜ್ಯಗಳ ಮೇಲೆ ಆರ್ಥಿಕ ಹೊರೆಯನ್ನು ಹೆಚ್ಚಿಸಲಿದೆ. ಈಶಾನ್ಯ ಮತ್ತು ಹಿಮಾಲಯನ್ ರಾಜ್ಯಗಳಿಗೆ 90:10 ಅನುಪಾತ ಇರಲಿದೆ. ಅಲ್ಲದೆ ಕೇಂದ್ರವೇ ಕೆಲಸದ ವ್ಯಾಪ್ತಿಗಳನ್ನು ನಿರ್ಧರಿಸುತ್ತದೆ. ಬಜೆಟ್ ಹಂಚಿಕೆಯನ್ನು ನಿಯಂತ್ರಿಸುತ್ತದೆ.

ಅನುದಾನ ವಿಧಾನ: ಬೇಡಿಕೆ ಆಧಾರಿತ(-) ವ್ಯವಸ್ಥೆಯ ಬದಲು ವಿವೇಚನಾ/ಮೌಲ್ಯಮಾಪನ ಆಧಾರಿತ (/-) ವ್ಯವಸ್ಥೆಯಲ್ಲಿದ್ದು, ಇದು ಪಾರದರ್ಶಕತೆಯನ್ನು ಕಡಿಮೆ ಮಾಡುತ್ತದೆ. ಅಲ್ಲದೆ ರಾಜ್ಯಗಳ ಸ್ವಾಯತ್ತತೆಯನ್ನು ದುರ್ಬಲಗೊಳಿಸುತ್ತದೆ. ಆದ್ದರಿಂದ ಹಿಂದಿನ ವರ್ಷಗಳಿಗಿಂತ ಕಡಿಮೆಯಲ್ಲದ ಅನುದಾನ ಬಿಡುಗಡೆ ಮಾಡಿ, ಮಹಿಳೆಯರು, ವಿಕಲಚೇತನರು, ಪರಿಶಿಷ್ಟ ಜಾತಿ/ಕುಲಗಳ ಜೀವನೋಪಾಯವನ್ನು ರಕ್ಷಣೆ ಮಾಡಬೇಕು ಎನ್ನಲಾಗಿದೆ.

ತಾಂತ್ರಿಕ ಬದಲಾವಣೆಗಳು: ಕಡ್ಡಾಯ ಆಧಾರ್ ಸೀಡಿಂಗ್, ಮೊಬೈಲ್ ಅಪ್ಲಿಕೇಶನ್ ಮೂಲಕ ಹಾಜರಾತಿ ಮತ್ತು ಇತರ ಆಡಳಿತಾತ್ಮಕ ಬದಲಾವಣೆಗಳಂತಹ ಕ್ರಮಗಳಿಂದ ಗ್ರಾಮೀಣ ಕಾರ್ಮಿಕರಿಗೆ ತೊಂದರೆಯಾಗುತ್ತದೆ ಎಂಬ ಆತಂಕವನ್ನು ನಿರ್ಣಯದಲ್ಲಿ ತಿಳಿಸಿದೆ.

ಸಾಮಾಜಿಕ ಪರಿಣಾಮ : ತಮಿಳುನಾಡಿನಲ್ಲಿ ಮಹಿಳೆಯರು, ಬಡವರು ಮತ್ತು ಅಲ್ಪಸಂಖ್ಯಾತರು ಹೆಚ್ಚಿನ ಫಲಾನುಭವಿಗಳಾಗಿದ್ದಾರೆ. ಇಲ್ಲಿಯ ಗ್ರಾಮೀಣ ಕಾರ್ಮಿಕರ ಉದ್ಯೋಗ ಹಕ್ಕು ಮತ್ತು ಸಾಮಾಜಿಕ ಭದ್ರತೆಗೆ ವಿಬಿ ಜಿ ರಾಮ್ ಜಿ ಧಕ್ಕೆ ತರುತ್ತದೆ ಎಂದು ಸರ್ಕಾರ ಆರೋಪಿಸಿದೆ.

ಒಕ್ಕೂಟ ವಿರೋಧಿ ಸ್ವಭಾವ: ವಿಬಿ ಜಿ ರಾಮ್ ಜಿ ರಾಜ್ಯಗಳ ಹಕ್ಕುಗಳನ್ನು ಕಸಿದುಕೊಳ್ಳುತ್ತದೆ. ಅಲ್ಲದೆ ಇದರಲ್ಲಿರುವ ಅಂಶಗಳು ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾಗಿದ್ದು, ಬಡ ರಾಜ್ಯಗಳನ್ನು ಯೋಜನೆಯಿಂದ ಹೊರಗಿಡುವಂತೆ ಮಾಡುತ್ತದೆ ಎಂದು ತಮಿಳುನಾಡು ಸರ್ಕಾರ ಆರೋಪಿಸಿದೆ. ಜತೆಗೆ ಕಾಂಗ್ರೆಸ್ ನಾಯಕರು ಇದನ್ನು ಸಂವಿಧಾನ ವಿರೋಧಿಯೆಂದು ಕರೆದಿದ್ದಾರೆ.

ಈ ಗೊತ್ತುವಳಿಯು ಧ್ವನಿಮತದ ಮೂಲಕ ಅಂಗೀಕರಿಸಲ್ಪಟ್ಟಿತು. ಸ್ಪೀಕರ್ ಎಂ ಅಪ್ಪಾವು ಅದನ್ನು ಏಕಮತದ್ದು ಎಂದು ಘೋಷಿಸಿದ್ದಾರೆ. ಮಿತ್ರಪಕ್ಷಗಳಾದ ಕಾಂಗ್ರೆಸ್, , (), ಮತ್ತು ಇತರರು ಬೆಂಬಲ ನೀಡಿದ್ದಾರೆ. ವಿಪಕ್ಷ ನಾಯಕ ಆರ್ ಬಿ ಉದಯಕುಮಾರ್ ಇದನ್ನು ರಾಜಕೀಯ ಪ್ರೇರಿತವೆಂದು ಕರೆದಿದ್ದು, ಪಕ್ಷವು ಮರುನಾಮಕರಣಕ್ಕೆ ವಿರೋಧ ವ್ಯಕ್ತಪಡಿಸಿತು. ಸದಸ್ಯರು ಅಧಿವೇಶನದಿಂದ ಹೊರಗುಳಿದರು.

ಮಂಡನೆಯ ಸಂದರ್ಭದಲ್ಲಿ ಸ್ಟಾಲಿನ್, ''ಕೇಂದ್ರ ಸರ್ಕಾರವು ತಮಿಳುನಾಡಿಗೆ ಅನ್ಯಾಯ ದೋರಣೆ ಮಾಡುತ್ತಿದ್ದು, ಮನರೇಗಾ ಅಡಿಯಲ್ಲಿ ₹1,026 ಕೋಟಿ ವೇತನ ಮತ್ತು ₹1,087 ಕೋಟಿ ಸಾಮಗ್ರಿ ಅನುದಾನ ಬಿಡುಗಡೆ ಮಾಡುವುದನ್ನು ವಿಳಂಬ ಮಾಡಿದೆ. - ಒಕ್ಕೂಟಕ್ಕೆ ವಿರುದ್ಧವಾಗಿದ್ದು, ರಾಜ್ಯಗಳ ಹಣಕಾಸು ಸ್ವಾಯತ್ತತೆ ಮತ್ತು ಸ್ಥಳೀಯ ಸಂಸ್ಥೆಗಳನ್ನು ದುರ್ಬಲಗೊಳಿಸುತ್ತದೆ. ಅಲ್ಲದೆ ತಮಿಳುನಾಡು ಕೇಂದ್ರ ಮತ್ತು ರಾಜ್ಯ ಯೋಜನೆಗಳನ್ನು ಸಮಾನವಾಗಿ ನಡೆಸುತ್ತಿದ್ದರೂ ಕೇಂದ್ರದಿಂದ ದ್ರೋಹಕ್ಕೆ ಒಳಗಾಗಿದೆ. ಪ್ರಧಾನಿ ನರೇಂದ್ರ ಮೋದಿಯವರು ತಮಿಳುನಾಡಿಗೆ ಭೇಟಿ ನೀಡುವ ಮುನ್ನವೇ ಈ ಗೊತ್ತುವಳಿಯನ್ನು ಮಂಡಿಸಲಾಗಿದೆ. ತಾಕತ್ತಿದ್ದರೆ ನಾಯಕ ಎಡಪ್ಪಾಡಿ ಕೆ. ಪಳನಿಸ್ವಾಮಿಯವರು ಮೋದಿಯವರೊಂದಿಗೆ ಈ ವಿಷಯವನ್ನು ಚರ್ಚಿಸಲಿ'' ಎಂದು ಸವಾಲು ಹಾಕಿದರು.

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ () 2005ರಲ್ಲಿ ಜಾರಿಗೆ ಬಂದಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ವಯಸ್ಕ ಕಾರ್ಮಿಕರಿಗೆ ವರ್ಷಕ್ಕೆ ಕನಿಷ್ಠ 100 ದಿನಗಳ ಉದ್ಯೋಗ ಖಾತರಿ ನೀಡುವ ಐತಿಹಾಸಿಕ ಕಾಯ್ದೆಯಾಗಿದೆ. ಇದು ಬಡತನ ನಿರ್ಮೂಲನೆ, ಮಹಿಳಾ ಸಬಲೀಕರಣ ಮತ್ತು ಗ್ರಾಮೀಣ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಆದರೆ, ಕೇಂದ್ರ ಸರ್ಕಾರದ - ಕಾಯ್ದೆ, 2025ರ ಮೂಲಕ ಮನರೇಗಾ ಕಾಯ್ದೆಯನ್ನು ಬದಲಾಯಿಸಿ, ಹೊಸ ಹೆಸರು ಮತ್ತು ರಚನೆಯನ್ನು ಜಾರಿಗೆ ತಂದಿದೆ. ಈ ಬದಲಾವಣೆಯು ಕೇಂದ್ರೀಕೃತ ನಿಯಂತ್ರಣವನ್ನು ಹೆಚ್ಚಿಸಿ, ರಾಜ್ಯಗಳ ಸ್ವಾಯತ್ತತೆಯನ್ನು ಕಡಿಮೆ ಮಾಡುತ್ತದೆ ಎಂಬ ಆರೋಪಕ್ಕೆ ಗುರಿಯಾಗಿದೆ.

ತಮಿಳುನಾಡಿನಂತಹ ರಾಜ್ಯಗಳಲ್ಲಿ ಮನರೇಗಾ ಕಾಯ್ದೆಯು ಸುಮಾರು 74 ಲಕ್ಷ ಸಕ್ರಿಯ ಕಾರ್ಮಿಕರಿಗೆ(65 ಲಕ್ಷ ಕುಟುಂಬಗಳು, ಅದರಲ್ಲಿ 85% ಮಹಿಳೆಯರು) ಜೀವನಾಧಾರವಾಗಿದೆ. ಹಾಗಾಗಿ ತಮಿಳುನಾಡು ವಿಧಾನಸಭೆಯಲ್ಲಿ ಅಂಗೀಕಾರಗೊಂಡ ಗೊತ್ತುವಳಿಯು ಕೇವಲ ಒಂದು ರಾಜಕೀಯ ಹೇಳಿಕೆಯಲ್ಲದೆ, ಗ್ರಾಮೀಣ ಭಾರತದ ಜೀವನೋಪಾಯ ರಕ್ಷಣೆಗಾಗಿ ಕೈಗೊಂಡಿರುವ ಒಂದು ದೃಢ ನಿಲುವು. ಕೇಂದ್ರ ಸರ್ಕಾರದ ಪ್ರತಿಕ್ರಿಯೆಯು ಭವಿಷ್ಯದ ನಿರ್ಣಯಗಳನ್ನು ನಿರ್ಧರಿಸಲಿದೆ. ಹಾಗಾಗಿ ಒಕ್ಕೂಟ ವ್ಯವಸ್ಥೆಯಲ್ಲಿ ಸಮತೋಲನ ಕಾಯುದುಕೊಳ್ಳಬೇಕು ಎಂಬುದನ್ನು ಈ ಗೊತ್ತುವಳಿ ಒತ್ತಿ ಹೇಳುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR